ಕನ್ನಡ ದಿನಪತ್ರಿಕೆ
9 ಫೆಬ್ರುವರಿ । ಶುಕ್ರವಾರ
9 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 | ಸಂಪುಟ – 4 ಸಂಚಿಕೆ – 311 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

# ಮೂರು ತಿಂಗಳೊಳಗೆ ಜನಸ್ಪಂದನ ಅಹವಾಲಿಗೆ ಪರಿಹಾರ ನೀಡಿ: ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ತಾಕೀತು

## ಸ್ಥಳದಲ್ಲೇ ಮೂವರ ಚಿಕಿತ್ಸೆಗೆ 10 ಲಕ್ಷ ಪರಿಹಾರ ಘೋಷಿಸಿದ ಸಿಎಂ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧದ ಮುಂಭಾಗದಲ್ಲಿ ಗುರುವಾರ ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮ ನಡೆಸಿದರು.

ಸಿಎಂ ಸಿದ್ದರಾಮಯ್ಯ ಅವರ ಎರಡನೇ ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮ ಇದಾಗಿತ್ತು. ಆದರೆ, ಈ ಮೊದಲು ತಮ್ಮ ಗೃಹ ಕಚೇ–ರಿಯಲ್ಲಿ ಜನಸ್ಪಂದನ ಕಾರ್ಯಕ್ರಮ ನಡೆಸಿದ್ದ ಅವರು, ಮೊದಲ ಬಾರಿಗೆ ಈಗ ವಿಧಾನಸೌಧದ ಎದುರೇ ಸಾರ್ವಜನಿಕರ ಅಹವಾಲು ಆಲಿಸಿದರು. ಜನಸ್ಪಂದನ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಅವರು ಸ್ಥಳದಲ್ಲೇ ಮೂವರ ಚಿಕಿತ್ಸೆಗೆ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಒಟ್ಟು 10 ಲಕ್ಷ. ರೂ ಪರಿಹಾರ ಘೋಷಿಸಿದರು.

ಈ ವೇಳೆ ಮಾತನಾಡಿದ ಸಿದ್ದರಾಮಯ್ಯ, "ಸ್ವೀಕರಿಸಲಾದ ಜನಸ್ಪಂದನ ಅರ್ಜಿಗಳಿಗೆ ಮೂರು ತಿಂಗಳಲ್ಲಿ ಪರಿಹಾರ ಕೊಡಬೇಕು. ಕಾನೂನು ಪ್ರಕಾರ ಪರಿಹಾರ ಸಾಧ್ಯವಿಲ್ಲದಿದ್ದರೆ ಹಾಗೇ ಹಿಂಬರಹ ಕೊಡಬೇಕು. ಪ್ರತೀ ಅರ್ಜಿಗೂ ಸರ್ಕಾರದ ಸ್ಪಂದನೆ ಇರಬೇಕು" ಎಂದು ಅಧಿಕಾ–ರಿಗಳಿಗೆ ಸ್ಪಷ್ಟ ಸೂಚನೆ ನೀಡಿದರು. ಇಲ್ಲಿಯವರೆಗೆ ಸ್ವೀಕರಿಸಲಾದ ಅರ್ಜಿಗಳ ಪೈಕಿ ಶೇ.98 ರಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಿ, ಜನರಿಗೆ ಪರಿಹಾರಗಳನ್ನು ಒದಗಿಸಲಾಗಿದೆ ಎಂದು ಅವರು ತಿಳಿಸಿದರು.

ನಮ್ಮ ಸರ್ಕಾರವನ್ನು ಜನರ ಬಳಿಗೇ ಒಯ್ಯಬೇಕೆಂಬುದು ನಮ್ಮ ಆಶಯವಾಗಿದೆ. ಈ ನಿಟ್ಟಿನಲ್ಲಿ ಎಲ್ಲ ಜಿಲ್ಲೆಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಈವರೆಗೆ ಒಟ್ಟು 108 ಜನಸ್ಪಂದನ ಕಾರ್ಯಕ್ರಮಗಳನ್ನು ನಡೆಸಿದ್ದಾರೆ ಎಂದು ವಿವರಿಸಿದರು. ಈಗಾಗಲೇ ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿಯೂ ಜನಸ್ಪಂದನ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಅಲ್ಲಿ ಬಗೆಹರಿಯದ ಸಮಸ್ಯೆಗಳನ್ನು ರಾಜ್ಯಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಜನರು ಸಲ್ಲಿಸಬಹುದಾಗಿದೆ. ಕಾನೂನುಬದ್ಧವಾದ ಸಮಸ್ಯೆಗಳಿಗೆ ನಮ್ಮ ಸರ್ಕಾರ ಪರಿಹಾರ ಒದಗಿಸಲಿದೆ. ಸಮಸ್ಯೆ ಬಗೆಹರಿಸಲು ಕಾನೂನು ತೊಡಕು ಇದ್ದಲ್ಲಿ, ಈ ಕುರಿತು ಅರ್ಜಿದಾರ–ರಿಗೆ ಕಾರಣ ಸಹಿತ ಹಿಂಬರಹ ನೀಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎನ್ನುವ ಆಶಯದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸರ್ಕಾರ ರೂಪಿಸುವ ಜನೋಪಯೋಗಿ ಕಾರ್ಯಕ್ರಮಗಳು ನೇರವಾಗಿ ಫಲಾನುಭವಿಗಳಿಗೆ ತಲುಪಬೇಕು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಎಂಟು ತಿಂಗಳೊಳಗಾಗಿ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇವೆ.

ಬಿಜೆಪಿಯವರು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವಿಲ್ಲ. ಕರ್ನಾಟಕ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಟೀಕಿಸಿದ್ದರು. ಯೋಜನೆ ಜಾರಿಗೊಳಿಸಿದಾಗ ವಿರೋಧ ಪಕ್ಷಗಳ ನಾಯಕರು ಈಗ ಯೋಜನೆ ಜಾರಿಗೊಳಿಸಿ ಆಮೇಲೆ ನಿಲ್ಲಿಸುತ್ತಾರೆ ಎಂದು ತಿಳಿಸಿದ್ದಾರೆ. ಆದರೆ ಇಂತಹ ಅಪಪ್ರಚಾರಗಳಿಗೆ ಕಿವಿಗೊಡಬಾರದು ಎಂದು ಮುಖ್ಯಮಂತ್ರಿಗಳು ಹೇಳಿದರು.

# ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಭೇಟಿಯಾದ ಸುಮಲತಾ



ಬೆಂಗಳೂರು: ಮಂಡ್ಯ ಸಂಸದೆ, ನಟಿ ಸುಮಲತಾ ಅಂಬರೀಶ್ ಗುರುವಾರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ಬಿಎಲ್ ಸಂತೋಷ್ ಅವರನ್ನು ಭೇಟಿಯಾಗಿದ್ದಾರೆ. ಈ ಮೂಲಕ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ಬಗ್ಗೆ ಒತ್ತಡ ಹಾಕಿರುವ ಊಹಾಪೋಹಗಳು ಹರಿದಾಡುತ್ತಿವೆ. 2019ರ ಲೋಕಸಭಾ ಚುನಾವಣೆಯಲ್ಲಿ ನಿಖಿಲ್ ಕುಮಾರಸ್ವಾಮಿ ಅವರನ್ನು ಸೋಲಿಸಿದ್ದ ಸಮಲತಾ ಅಂಬರೀಷ್, ನವದೆಹಲಿಯಲ್ಲಿಂದು ಬಿಜೆಪಿಯ ಈ ಇಬ್ಬರು ಉನ್ನತ ನಾಯಕರನ್ನು ಭೇಟಿ ಮಾಡಿದ್ದು, ಅವರೊಂದಿಗೆ ಮಂಡ್ಯ ಲೋಕಸಭಾ ಕ್ಷೇತ್ರ ಹಾಗೂ ಚುನಾವಣೆ ಕುರಿತು ಅನೌಪಚಾರಿಕವಾಗಿ ಮಾತುಕತೆ ನಡೆಸಿದ್ದು, ತಮ್ಮ ಸಹಕಾರದ ಮಾತುಗಳಿಗೆ ಧ್ಯನವಾದ ಎಂದು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಬರೆದುಕೊಂಡಿದ್ದಾರೆ.

# ಮಹಾರಾಷ್ಟ್ರಕ್ಕೆ ಸಾಗಿಸುತ್ತಿದ್ದ 7 ಲಕ್ಷಕ್ಕೂ ಅಧಿಕ ಮೌಲ್ಯದ ತಂಬಾಕು ಜಪ್ತಿ



ಬೀದರ್ : ಅಕ್ರಮವಾಗಿ ಮಹಾರಾಷ್ಟ್ರಕ್ಕೆ ಸಾಗಿಸುತ್ತಿದ್ದ 7. 20 ಲಕ್ಷ ರೂ. ಮೌಲ್ಯದ ತಂಬಾಕು ಜಪ್ತಿ ಮಾಡಿದ ಘಟನೆ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ಬಂಗ್ಲಾ ಕ್ರಾಸ್ ಬಳಿ ನಡೆದಿದೆ. ಸರ್ಕಾರದಿಂದ ಯಾವುದೇ ಪರವಾನಿಗೆ ಇಲ್ಲದೆ ಪ್ರತಿಷ್ಠಿತ M – SCENTED TOBACOO GOLD ಕಂಪನಿಯ ತಂಬಾಕು ಪ್ಯಾಕೆಟ್‌ಗಳನ್ನು ಸಾಗಿಸಲಾಗುತ್ತಿತ್ತು. ಹೈದರಾಬಾದ್‌ನಿಂದ ಮುಂಬೈಗೆ ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಜಾಫರ್ಮಿಯಾ ಎಂಬಾತನ ಮೇಲೆ ಮೇಲೆ ಎಫ್‌ಐಆರ್ ದಾಖಲಾಗಿದೆ. ಅಕ್ರಮ ಸಾಗಾಟಕ್ಕೆ ಬಳಸಿದ್ದ 20 ಲಕ್ಷ ಮೌಲ್ಯದ ವಾಹನವೂ ಜಪ್ತಿ ಮಾಡಲಾಗಿದ್ದು ಈ ಕುರಿತು ಬಸವಕಲ್ಯಾಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಿಸಿಯೂಟ ಸೇವಿಸಿ ಇಬ್ಬರು ಶಿಕ್ಷಕರು ಸೇರಿ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥ

ತುಮಕೂರು: ಬಿಸಿಯೂಟ ಸೇವಿಸಿ ಇಬ್ಬರು ಶಿಕ್ಷಕರು ಸೇರಿ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥಗೊಂಡಿ ರುವಂತಹ ಘಟನೆ ತುಮಕೂರಿನ ಕುಣಿಗಲ್ ತಾಲೂಕಿನ ಸೀನಪ್ಪನಹಳ್ಳಿ ಅಂಬಾಭವಾನಿ ಅನುದಾನಿತ ಪ್ರೌಢಶಾಲೆಯಲ್ಲಿ ಘಟನೆ ನಡೆದಿದೆ. ಮಧ್ಯಾಹ್ನ ಶಾಲೆಯಲ್ಲಿ ನೀಡಲಾಗಿದ್ದ ಮೊಸರನ್ನವನ್ನು ಮಕ್ಕಳು ಸೇವನೆ ಮಾಡಿದ್ದಾರೆ. ರಾತ್ರಿ ವೇಳೆಗೆ ಮಕ್ಕಳ ಆರೋಗ್ಯದಲ್ಲಿ ಏರುಪೇರು ಕಂಡುಬಂದಿದೆ. ಕೂಡಲೇ ಪೋಷಕರು ಕುಣಿಗಲ್ ತಾಲೂಕಿನ ಹಿಪ್ಪಾಡಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದ್ದಾರೆ. 10 ಮಕ್ಕಳಿಗೆ ಹೆಚ್ಚಿನ ಚಿಕಿತ್ಸೆಗಾಗಿ ಕುಣಿಗಲ್ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ, ಸ್ಥಳಕ್ಕೆ ಇದೀಗ ಕುಣಿಗಲ್ ಟಿಹೆಚ್ಒ ಡಾ. ಮರಿಯಪ್ಪ, ಹಾಗೂ ಆರೋಗ್ಯಾಧಿಕಾರಿ ಬೋರೆಗೌಡ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಅಸ್ವಸ್ಥ ವಿದ್ಯಾರ್ಥಿಗಳಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆದಿದೆ.

# ಪಾರ್ಲಿಮೆಂಟ್ ಕಡೆಗೆ ರೈತರ ಬೃಹತ್ ಪ್ರತಿಭಟನಾ ಮೆರವಣಿಗೆ: ದೆಹಲಿ–ನೋಯ್ಡಾ ಗಡಿ ಬಂದ್




ನೋಯ್ಡಾ: ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ, ರೈತರಿಗೆ ಪಿಂಚಣಿ ಮತ್ತು ಬೆಳೆ ವಿಮೆ ಸೇರಿದಂತೆ ಮತ್ತಿತರ ಬೇಡಿಕೆಗಳ ಈಡೇ–ರಿಕೆಗೆ ಒತ್ತಾಯಿಸಿ ಪಾರ್ಲಿಮೆಂಟ್ ನತ್ತ ರೈತರ ಬೃಹತ್ ಪ್ರತಿಭಟನಾ ಮೆರವಣಿಗೆ ಸಾಗುತ್ತಿದೆ. ಸಾವಿರಾರು ರೈತರು ಮತ್ತು ಹಳ್ಳಿಗರು ಮೆರವಣಿಗೆಯಲ್ಲಿ ತೆರಳುತ್ತಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ದೆಹಲಿ–ನೋಯ್ಡಾ ಗಡಿ ಬಂದ್ ಮಾಡಲಾಗಿದೆ.

ದೆಹಲಿಯೊಂದಿಗಿನ ಗಡಿಯಲ್ಲಿ ಉತ್ತರ ಪ್ರದೇಶ ಸರ್ಕಾರ ಭದ್ರತೆಯನ್ನು ಹೆಚ್ಚಿಸಿದೆ. ನೋಯ್ಡಾ ಗಡಿಯಲ್ಲಿ ಸಶಸ್ತ್ರ ಪಡೆ ನಿಯೋಜನೆ ಮೂಲಕ ಬಿಗಿ ಬಂದೋಬಸ್ತ್ ಮಾಡಲಾಗಿದೆ. 24 ಗಂಟೆಗಳ ಕಾಲ ಗಡಿಯನ್ನು ಮುಚ್ಚಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರೈತರು ರಾಷ್ಟ್ರ ರಾಜಧಾನಿ ಪ್ರವೇಶಿಸದಂತೆ ತಡೆಯಲು ಮಯೂರು ವಿಹಾರ್ ಬಳಿಯ ದೆಹಲಿ–ನೋಯ್ಡ ಗಡಿಯ ರಸ್ತೆಯಲ್ಲಿ ಸಂಚಾರವನ್ನು ನಿರ್ಬಂಧಿಸಲು ಭಾರಿ ಶಸಾಸ್ತ್ರಗಳೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಪೊಲೀಸರನ್ನು ನಿಯೋಜಿಸಿದ್ದರಿಂದ ವಾಹನ ಸವಾರರು ಗಂಟೆಗಟ್ಟಲೇ ತೆವಳುತ್ತಾ ಸಾಗುವಂತಾಯಿತು.

ಸಂಯುಕ್ತ ಕಿಸಾನ್ ಮೋರ್ಚಾ ಮತ್ತು ಅಖಿಲ ಭಾರತೀಯ ಕಿಸಾನ್ ಸಭಾ ಸಂಘಟನೆಗಳ ಕಾರ್ಯಕರ್ತರು ಗುರುವಾರ ನೋಯ್ಡಾ ಸೆಕ್ಟರ್ 24 ರ ಎನ್‌ಟಿಸಿಪಿ ಕಚೇರಿ ಮತ್ತು ಗ್ರೇಟ–ರ್ ನೋಯ್ಡಾ ಕೈಗಾರಿಕಾ ಅಭಿವೃದ್ಧಿ ಪ್ರಾಧಿಕಾರದ ಕಚೇರಿಯ ಹೊರಗೆ ಜಮಾಯಿಸಿ, ಶೇ 10 ರಷ್ಟು ಗೋಮಾಳ ಭೂಮಿಗೆ ಒತ್ತಾಯಿಸಿದರು. ರೈತ ಮುಖಂಡ ರಾಕೇಶ್ ಟಿಕಾಯತ್ ಅವರು ಮಧ್ಯಾಹ್ನ ಗ್ರೇಟರ್ ನೋಯ್ಡಾದಲ್ಲಿ ಪ್ರತಿಭಟನಾಕಾರರೊಂದಿಗೆ ಸೇರಿಕೊಂಡರು.

ಈ ಮಧ್ಯೆ ಕೇಂದ್ರ ಸಚಿವರಾದ ಅರ್ಜುನ್ ಮುಂಡಾ, ನಿತ್ಯಾನಂದ ರೈ ಮತ್ತು ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಸಂಜೆ 6 ಗಂಟೆಗೆ ಚಂಡೀಗಢದಲ್ಲಿ ಪ್ರತಿಭಟನಾ ನಿರತ ರೈತರ ಪ್ರತಿನಿಧಿಗಳನ್ನು ಭೇಟಿ ಮಾಡಲಿದ್ದಾರೆ ಎಂದು ಎನ್‌ಡಿಟಿವಿ ವರದಿ ಮಾಡಿದೆ.



# ಉಗ್ರರ ದಾಳಿಗೆ ಇಬ್ಬರು ಕಾರ್ಮಿಕರು ಬಲಿ: ಸೇನೆ ಅಲರ್ಟ್

ಶ್ರೀನಗರ : ನಗರದ ಹಬ್ಬಾ ಕಡಲ್ ಪ್ರದೇಶದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಗಾಯಗೊಂಡ ಪಂಜಾಬ್ನ ಕಾರ್ಮಿಕರೊಬ್ಬರು ಇಲ್ಲಿನ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದು, ಸಾವಿನ ಸಂಖ್ಯೆ ಎರಡಕ್ಕೆ ಏರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರೋಹಿತ್ ಮಸಿಹ್ ಅವರು ಇಂದು ಬೆಳಿಗ್ಗೆ ಇಲ್ಲಿನ ಎಸ್ಕೆಐಎಂಎಸ್ ಆಸ್ಪತ್ರೆಯಲ್ಲಿ ದಾಖಲಾಗಿದ್ದ ಅವರನ್ನು ತೃತೀಯ ಆರೈಕೆ ಸಂಸ್ಥೆಗೆ ಸ್ಥಳಾಂತರಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಂಜಾಬ್ನ ಮತ್ತೊಬ್ಬ ಕಾರ್ಮಿಕ ಅಮೃತಪಾಲ್ ಸಿಂಗ್ ಬುಧವಾರ ಹಬ್ಬಾ ಕಡಲ್ನ ಶಲ್ಲಾ ಕಡಲ್ನಲ್ಲಿ ನಡೆದ ಭಯೋತ್ಪಾದಕರ ಗುಂಡಿನ ದಾಳಿಯಲ್ಲಿ ಸಾವನ್ನಪ್ಪಿದ್ದರು. ಇದು ವರ್ಷದ ಮೊದಲ ಉದ್ದೇಶಿತ ಹತ್ಯೆಯಾಗಿದೆ.

ಭಯೋತ್ಪಾದಕರು 2023 ರಲ್ಲಿ ಸ್ಥಳೀಯರಲ್ಲದ ಕಾರ್ಮಿಕರ ಮೇಲೆ ಮೂರು ದಾಳಿಗಳನ್ನು ನಡೆಸಿದ್ದರು, ಇದರ ಪರಿಣಾಮವಾಗಿ ಇಬ್ಬರು ವ್ಯಕ್ತಿಗಳು ಸಾವನ್ನಪ್ಪಿದರು ಮತ್ತು ಮೂವರಿಗೆ ಗಾಯಗಳಾಗಿವೆ.

ಮೇ 30, 2023 ರಂದು ಅನಂತ್ನಾಗ್ ಜಿಲ್ಲೆಯಲ್ಲಿ ಉಧಮ್ಪುರ ಜಿಲ್ಲೆಯ ಸರ್ಕಸ್ ಕೆಲಸಗಾರನನ್ನು ಭಯೋತ್ಪಾದಕರು ಗುಂಡಿಕ್ಕಿ ಕೊಂದಿದ್ದರೆ, ಬಿಹಾರದ ಇಟ್ಟಿಗೆ ಗೂಡು ಕೆಲಸಗಾರ ಮುಕೇಶ್ ಕುಮಾರ್ ಅವರನ್ನು ಕಳೆದ ವರ್ಷ ಅಕ್ಟೋಬರ್ 31 ರಂದು ಪುಲ್ವಾಮಾ ಜಿಲ್ಲೆಯಲ್ಲಿ ಉಗ್ರರು ಗುಂಡಿಕ್ಕಿ ಕೊಂದಿದ್ದರು.

ಜುಲೈ 13 ರಂದು ಶೋಪಿಯಾನ್ ಜಿಲ್ಲೆಯ ಗಾಗ್ರೆನ್ ಪ್ರದೇಶದಲ್ಲಿ ಭಯೋತ್ಪಾದಕರು ನಡೆಸಿದ ದಾಳಿಯಲ್ಲಿ ಮೂವರು ಕಾರ್ಮಿಕರು ಗಾಯಗೊಂಡಿದ್ದರು.

# ನೀವು ಪ್ರಧಾನಿಯಾದರೆ ಕಾಂಗ್ರೆಸ್ ಸಹಿಸಿಕೊಳ್ಳುತ್ತದೆಯೇ: ಖರ್ಗೆಗೆ ದೇವೇಗೌಡ ಪ್ರಶ್ನೆ

ನವದೆಹಲಿ: ನೀವು ಪ್ರಧಾನಿಯಾದರೆ ಕಾಂಗ್ರೆಸ್ ಸಹಿಸಿಕೊಳ್ಳುತ್ತದೆಯೇ ಎಂದು ಮಲ್ಲಿಕಾರ್ಜುನ ಖರ್ಗೆಯವರಿಗೆ ಮಾಜಿ ಪ್ರಧಾನಮಂತ್ರಿ ಹೆಚ್'ಡಿ. ದೇವೇಗೌಡ ಅವರು ಗುರುವಾರ ಪ್ರಶ್ನಿಸಿದ್ದಾರೆ.

ರಾಜ್ಯಸಭೆಯಲ್ಲಿ ಮೊದಲು ಮಾತನಾಡಿದ ಪ್ರಧಾನಿ ಮೋದಿಯವರು, ಡಾ.ಮನಮೋಹನ್ ಸಿಂಗ್ ಅವರನ್ನು ಕೊಂಡಾಡಿದರು.

ಬಳಿಕ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮಾತನಾಡಿ, ಮನಮೋಹನ್ ಸಿಂಗ್ ಒಳ್ಳೆಯ ಕೆಲಸ ಮಾಡಿದ್ದಾರೆ. ಪ್ರಧಾನಿ ಅವರ



ಬಗ್ಗೆ ಆಡಿದ ಮಾತುಗಳಿಗಾಗಿ ನಾನು ಧನ್ಯವಾದ ಹೇಳುತ್ತೇನೆ. ಹೀಗೆಯೇ ಇರಬೇಕು. ಒಳ್ಳೆಯ ಕೆಲಸವನ್ನು ಮೆಚ್ಚಿ, ಕೆಟ್ಟದ್ದನ್ನು ಟೀಕಿಸಬೇಕು ಎಂದು ಹೇಳಿದರು.

ಇದೇ ವೇಳೆ ರಾಜ್ಯಸಭೆಯಲ್ಲಿ ದೇಶಕ್ಕೆ ಸಂಬಂಧಿಸಿದ ನಿರ್ಣಾಯಕ ವಿಷಯಗಳ ಬಗ್ಗೆ ಹೆಚ್ಚಿನ ಚರ್ಚೆಗಳನ್ನು ನಡೆಸುವಂತೆ ಖರ್ಗೆ ಸದನವನ್ನು ಒತ್ತಾಯಿಸಿದರು. ಬಳಿಕ ದೇವೇಗೌಡ ಅವರ ಕುರಿತು ಮಾತನಾಡಿದ ಅವರು, ನಿಮಗೆ ಆರ್ಥಿಕವಾಗಿ ಬೆಂಬಲ ನೀಡಲು ಯಾರೂ ಇಲ್ಲ, ನನ್ನ ಮೈತ್ರಿಗೆ ಯಾರು ಬೆಂಬಲ ನೀಡುತ್ತಾರೆ?" ಎಂದು ದೇವೇಗೌಡ ಅವರು ನನ್ನನ್ನು ಪ್ರಶ್ನಿಸಿದ್ದರು. ಮೋದಿ ಮತ್ತು ದೇವೇಗೌಡರ ಪ್ರೇಮ ಸ್ವಲ್ಪ ತಡವಾಗಿದೆ ಮೂಡಿದೆ" ಎಂದು ಹೇಳಿ ದೇವೇಗೌಡ ಮತ್ತು ಬಿಜೆಪಿ ಮೈತ್ರಿ ಬಗ್ಗೆ ಮಾತನಾಡಿದರು.

# ನಳಿನ್ ಕುಮಾರ್ ಕಟೀಲ್ ಮನೆ ಮುತ್ತಿಗೆಗೆ ಯತ್ನ; ಎನ್‌ಎಸ್‌'ಯುಐ ಕಾರ್ಯಕರ್ತರು ವಶಕ್ಕೆ




ಮಂಗಳೂರು: ಕೇಂದ್ರದಿಂದ ರಾಜ್ಯಕ್ಕೆ ಅನುದಾನ ಹಂಚಿಕೆ ವಿಚಾರದಲ್ಲಿ ಅನ್ಯಾಯ ವಾಗಿದ್ದು, ಸಂಸದನಾಗಿ ಜಿಲ್ಲೆಗೆ ಅನುದಾನ ತರುವಲ್ಲಿ ವಿಫಲವಾಗಿದ್ದಾರೆ. ಯಾವುದೇ ಅಭಿವೃದ್ಧಿ ಕಾರ್ಯವನ್ನು ಮಾಡಿಲ್ಲ ಎಂದು ಆರೋಪಿಸಿ ಎನ್‌ಎಸ್ ಯುಐ ಕಾರ್ಯಕರ್ತರು ದಕ್ಷಿಣ ಕನ್ನಡ ಜಿಲ್ಲಾ ಸಂಸದ ನಳಿನ್ ಕುಮಾರ್ ಕಟೀಲ್ ಅವರ ಮನೆಗೆ ಮುತ್ತಿಗೆ ಯತ್ನ ನಡೆಸಿದ್ದು, ಈ ವೇಳೆ ಹಲವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ನಳಿನ್ ಕುಮಾರ್ ಕಟೀಲ್ ವಿರುದ್ಧ ಘೋಷಣೆ ಕೂಗಿದ ಎನ್‌ಎಸ್ಯುಐ ಕಾರ್ಯಕರ್ತರು ಕಟೀಲ್ ಅವರ ಮನೆ ಮುಂದೆ ಭಾರೀ ಹೈಡ್ರಾಮಾ ಮಾಡಿದರು. ಬಿಗಿ ಪೊಲೀಸ್ ಬಂದೋಬಸ್ತ್ ನಡುವೆಯೂ ಕಟೀಲ್ ಮನೆಗೆ ನುಗ್ಗಲು ಕಾರ್ಯಕರ್ತರು ಯತ್ನ ನಡೆಸಿದರು. ಈ ವೇಳೆ ಸ್ಥಳಕ್ಕೆ ದೌಡಾಯಿಸಿದ ಪೊಲೀಸರು, ಎನ್‌ಎಸ್ಯುಐ ಕಾರ್ಯಕರ್ತರನ್ನು ತಡೆದು ವಶಕ್ಕೆ ಪಡೆದುಕೊಂಡರು. ಘಟನೆ ಬಳಿಕ ಮಂಗಳೂ–ರಿನ ಉರ್ವದಲ್ಲಿರುವ ಅಶೋಕಾ ಅಪಾರ್ಟ್ ಮೆಂಟ್ ಸುತ್ತ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿದೆ.

# ಕಾರ್ಕಳ ಪರಶುರಾಮ ಥೀಮ್ ಪಾರ್ಕ್ ಕಾಮಗಾರಿಯಲ್ಲಿ ಅಕ್ರಮ; ಸಿಐಡಿ ತನಿಖೆಗೆ ಆದೇಶ



ಉಡುಪಿ: ಕಾರ್ಕಳದ ಎರ್ಲಪಾಡಿ ಗ್ರಾಮದ ಬೈಲೂ–ರಿನಲ್ಲಿರುವ ಪರಶುರಾಮ ಥೀಮ್ ಪಾರ್ಕ್ ನಿರ್ಮಾಣ ಕಾಮಗಾರಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರ ಪ್ರಕರಣದ ತನಿಖೆಯನ್ನು ಸಿಐಡಿಗೆ ಒಪ್ಪಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಹೊರಡಿಸಿದ್ದಾರೆ. ಉಡುಪಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವೆ ಲಕ್ಷ್ಮೀ ಆರ್. ಹೆಬ್ಬಾಳ್ಕರ್ ಅವರ ಶಿಫಾರಸಿನಂತೆ ಮುಖ್ಯಮಂತ್ರಿ ಈ ಆದೇಶ ಹೊರಡಿಸಿದ್ದಾರೆ. ಪರಶುರಾಮ ಥೀಮ್ ಪಾರ್ಕ್ ಕಾಮಗಾ–ರಿಯಲ್ಲಿ ನಡೆದ ಕಳಪೆ ಕಾಮಗಾರಿ ಹಾಗೂ ಅವ್ಯವಹಾರದ ಬಗ್ಗೆ, ಜೊತೆಗೆ ಧಾರ್ಮಿಕ ಭಾವನೆಗಳಿಗೆ ಅಪಪ್ರಚಾರವಾಗಿರುವ ಸಂಬಂಧ ಸಾರ್ವಜನಿಕರಿಂದ ಭಾರೀ ದೂರು ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ಥೀಮ್ ಪಾರ್ಕ್ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದಂತೆ ತನಿಖೆ ನಡೆಸುವಂತೆ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮಿ ಆರ್. ಹೆಬ್ಬಾಳ್ಕರ್ ಅವರು ಫೆ.2ರಂದು ಮುಖ್ಯಮಂತ್ರಿಗೆ ಪತ್ರ ಬರೆದು ಮನವಿ ಮಾಡಿದ್ದರು. ಅದರಂತೆ ಇದೀಗ ಮುಖ್ಯಮಂತ್ರಿ ಸಿಐಡಿ ತನಿಖೆಗೆ ಆದೇಶ ಹೊರಡಿಸಿದ್ದಾರೆ.

# ಬೆಂಗಳೂರಿನ ಕುಂಬಾರಪೇಟೆ ಅಂಗಡಿಯಲ್ಲಿ ಡಬಲ್ ಮರ್ಡರ್: ಆರೋಪಿ ಪೊಲೀಸರಿಗೆ ಶರಣು



ಬೆಂಗಳೂರು: ಆಸ್ತಿ ವಿವಾದದ ಹಿನ್ನೆಲೆಯಲ್ಲಿ ಬೆಂಗಳೂರಿನ ಕುಂಬಾರಪೇಟೆ ಮುಖ್ಯರಸ್ತೆಯ ಅಂಗಡಿಯೊಂದರಲ್ಲಿ ಬುಧವಾರ ಸಂಜೆ ಜೋಡಿ ಕೊಲೆ ನಡೆದಿದೆ. ಡಬಲ್ ಮರ್ಡರ್ ಮಾಡಿದ ನಂತರ ಆರೋಪಿ ಪೊಲೀಸರ ಮುಂದೆ ಶರಣಾಗಿದ್ದಾರೆ. ಕೊಲೆಯಾದವರನ್ನು ಪದ್ಮನಾಭನಗರ ನಿವಾಸಿ ಸುರೇಶ್(55) ಮತ್ತು ಚಾಮರಾಜಪೇಟೆಯ ಮಹೇಂದ್ರ(68) ಎಂದು ಗುರುತಿಸಲಾಗಿದೆ. ಸುರೇಶ್ ಕುಂಬಾರಪೇಟೆ ಮುಖ್ಯರಸ್ತೆಯ ಮಾರುತಿ ಕಾಂಪ್ಲೆಕ್ಸ್‌ನಲ್ಲಿ ಅಡುಗೆ ಸಾಮಾನುಗಳ ಅಂಗಡಿ ನಡೆಸುತ್ತಿದ್ದರೆ, ಮಹೇಂದ್ರ ಅದೇ ಪ್ರದೇಶದಲ್ಲಿ ಹಾರ್ಡ್‌ವೇರ್ ಅಂಗಡಿ ನಡೆಸುತ್ತಿದ್ದರು. ಇನ್ನು ಆರೋಪಿಯನ್ನು ಮಡಿವಾಳ ನಿವಾಸಿ ಭದ್ರ ಪ್ರಸಾದ್ ಎಂದು ಗುರುತಿಸಲಾಗಿದ್ದು, ಈತ ಸುರೇಶ್ ಅವರ ದೂರದ ಸಂಬಂಧಿ. ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಎಲೆಕ್ಟ್ರಿಕ್ ಉಪಕರಣಗಳ ಅಂಗಡಿ ನಡೆಸುತ್ತಿದ್ದಾರೆ. ಸುರೇಶ್ ಮತ್ತು ಮಹೇಂದ್ರ ಹಲವು ವರ್ಷಗಳಿಂದ ಸ್ನೇಹಿತರಾಗಿದ್ದು, ಪ್ರತಿ ದಿನ ಸಂಜೆ ಅವರ ಅಂಗಡಿಗೆ ಬರುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಬುಧವಾರ ರಾತ್ರಿ 8 ಗಂಟೆಗೆ ಭದ್ರ ಪ್ರಸಾದ್ ಅವರು ಸುರೇಶ್ ಅವರೊಂದಿಗೆ ಆಸ್ತಿ ವಿವಾದದ ಬಗ್ಗೆ ಚರ್ಚಿಸುವ ನೆಪದಲ್ಲಿ ಅಂಗಡಿಗೆ ಬಂದಿದ್ದು, ಇಬ್ಬರ ನಡುವೆ ತೀವ್ರ ವಾಗ್ವಾದ ನಡೆದಿದೆ. ಈ ವೇಳೆ ಭದ್ರ ಪ್ರಸಾದ್ ಅವರು ಚಾಕು ತೆಗೆದುಕೊಂಡು ಕುರ್ಚಿಯ ಮೇಲೆ ಕುಳಿತಿದ್ದ ಸುರೇಶ್‌ಗೆ ಹಲವು ಬಾರಿ ಇರಿದಿದ್ದಾನೆ. ತನ್ನ ಸ್ನೇಹಿತನನ್ನು ರಕ್ಷಿಸಲು ಯತ್ನಿಸಿದ ಮಹೇಂದ್ರನ ಮೇಲೂ ದಾಳಿಕೋರ ಚಾಕುವಿನಿಂದ ಇರಿದಿದ್ದಾರೆ. ಮಹೇಂದ್ರ ಅಂಗಡಿಯಿಂದ ಹೊರಗೆ ಓಡಿ ತನ್ನ ಪ್ರಾಣ ಉಳಿಸಿಕೊಳ್ಳಲು ಯತ್ನಿಸಿದನಾದರೂ, ಭದ್ರ ಪ್ರಸಾದ್ ಆತನನ್ನು ಹಿಂಬಾಲಿಸಿ ಚಾಕುವಿನಿಂದ ಇರಿದು ಕೊಂದು ಸ್ಥಳದಿಂದ ಓಡಿಹೋಗಿ ಪೊಲೀಸರ ಮುಂದೆ ಶರಣಾಗಿದ್ದಾನೆ.

# ಇಂದಿನಿಂದ ಮೂರು ದಿನ ಗ್ರಾಮ ಚಲೋ ಅಭಿಯಾನ: ಬಿ.ವೈ. ವಿಜಯೇಂದ್ರ

ಬೆಂಗಳೂರು: ರಾಜ್ಯ ಬಿಜೆಪಿಯಿಂದ ನಾಳೆಯಿಂದ ಮೂರು ದಿನ ಗ್ರಾಮ ಚಲೋ ಅಭಿಯಾನ ನಡೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಹೆಚ್. ಗೊಲ್ಲಹಳ್ಳಿ ಗ್ರಾಮದಲ್ಲಿ 'ಗ್ರಾಮ ಚಲೋ' ಕಾರ್ಯಕ್ರಮದಲ್ಲಿ ಪಾಲ್ಗೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಅಧ್ಯಕ್ಷರಾದ ನಡ್ಡಾಜೀ ಮತ್ತು ನಮ್ಮ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಜೀ ಅವರ ಅಪೇಕ್ಷೆಯಂತೆ 'ಗ್ರಾಮ ಚಲೋ' ಅಭಿಯಾನಕ್ಕೆ ಚಾಲನೆ ನೀಡಿದ್ದೇವೆ. ರಾಜ್ಯದಲ್ಲಿ 28 ಸಾವಿರಕ್ಕೂ ಹೆಚ್ಚು ಹಳ್ಳಿಗಳು, 19 ಸಾವಿರ ನಗರ ಬೂತ್ಗಳಲ್ಲಿ ಒಟ್ಟಾರೆಯಾಗಿ 42 ಸಾವಿರ ಕಾರ್ಯಕರ್ತರು ಮೂರು ದಿನಗಳ ಕಾಲ ನಿರಂತರವಾಗಿ ಈ ಅಭಿಯಾನದಲ್ಲಿ ಭಾಗವಹಿಸುತ್ತಾರೆ ಎಂದು ವಿವರಿಸಿದರು.

2047ನೇ ಇಸವಿಗೆ ಭಾರತವು 'ವಿಕಸಿತ ಭಾರತ'ವಾಗಿ ಪರಿವರ್ತನೆ ಹೊಂದಬೇಕು; ಭಾರತವು ಸಂಪೂರ್ಣ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಿ ಪರಿವರ್ತನೆ ಕಾಣಬೇಕೆಂಬ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಜೀ ಅವರ ಕನಸು ನನಸಾಗಲು ಗ್ರಾಮಗಳೂ ಅಭಿವೃದ್ಧಿ ಹೊಂದಬೇಕಿದೆ ಎಂದು ವಿಶ್ಲೇಷಿಸಿದರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸವಲತ್ತುಗಳು ಸಿಗಬೇಕು. ಈ ನಿಟ್ಟಿನಲ್ಲಿ 'ಗ್ರಾಮ ಚಲೋ' ಅಭಿಯಾನವು ಉತ್ತಮ ಅಭಿಯಾನ ಆಗಲಿದೆ. ಈ ಅಭಿಯಾನದ ಮೂಲಕ ಪ್ರತಿ ಗ್ರಾಮ, ಪ್ರತಿ ಮನೆಗೂ ಬಿಜೆಪಿ ಕಾರ್ಯಕರ್ತರು ತಲುಪಲಿದ್ದು, ಕೇಂದ್ರ ಸರಕಾರವು ನರೇಂದ್ರ ಮೋದಿಜೀ ಅವರ ನೇತೃತ್ವದಲ್ಲಿ ಕೊಟ್ಟ ಜನಪರ ಯೋಜನೆಗಳನ್ನು ಮನೆಮನೆಗೆ ತಲುಪಿಸಲಾಗುತ್ತದೆ ಎಂದು ತಿಳಿಸಿದರು.

ಈ ಅಭಿಯಾನವು ಬಿಜೆಪಿಗೆ ದೊಡ್ಡ ಶಕ್ತಿಯಾಗಲಿದೆ. 'ಮೋದಿ ಮತ್ತೊಮ್ಮೆ' ಎಂಬ ವಿಚಾರವನ್ನು ಮುಂದಿಟ್ಟುಕೊಂಡು,




ಮೋದಿಜೀ ಅವರು 3ನೇ ಬಾರಿಗೆ ಪ್ರಧಾನಿ ಆಗಬೇಕೆಂಬ ಆಶಯವನ್ನು ಹೊಂದಿ ಗೋಡೆ ಬರಹ ಬರೆಯಲಾಗುವುದು. ಕಳೆದ 10 ವರ್ಷಗಳಲ್ಲಿ ಆಗಿರುವ ಅಭಿವೃದ್ಧಿ ಕಾರ್ಯಗಳು ದೇಶದ ಕಟ್ಟಕಡೆಯ ವ್ಯಕ್ತಿಗೂ ತಲುಪಬೇಕೆಂಬ ನಿಟ್ಟಿನಲ್ಲಿ ಈ ಅಭಿಯಾನ ನಡೆಯುತ್ತಿದೆ. ದೇಶದ ಪ್ರತಿಯೊಬ್ಬ ನಾಗ–ರಿಕರೂ ಮೋದಿಜೀ ಮತ್ತೊಮ್ಮೆ ಪ್ರಧಾನಿ ಆಗಬೇಕೆಂದು ಆಶಿಸುತ್ತಿದ್ದಾರೆ ಎಂದು ನುಡಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಕಾರ್ಯಕ್ರಮದಲ್ಲಿ ಕೊಂಚ ಬದಲಾವಣೆ ಆಗಿದೆ. ಇದೇ 10 ರಂದು ರಾತ್ರಿ ನೇರವಾಗಿ ದೆಹಲಿಯಿಂದ ಮೈಸೂರಿಗೆ ತಲುಪುತ್ತಾರೆ. 11ರ ಬೆಳಿಗ್ಗೆ ಚಾಮುಂಡಿ ಬೆಟ್ಟಕ್ಕೆ ತೆರಳಿ ತಾಯಿಯ ದರ್ಶನ ಪಡೆದುಕೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಾರೆ. ಸಂಜೆ ಸುತ್ತೂರು ಜಾತ್ರೆಯಲ್ಲಿ ಪಾಲ್ಗೊಳ್ಳುತ್ತಾರೆ. ಸಂಜೆ ಬಿಜೆಪಿ ಕಾರ್ಯಕರ್ತರ ಸಭೆಯೂ ನಡೆಯಲಿದೆ ಎಂದು ವಿಜಯೇಂದ್ರ ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಕಾಂಗ್ರೆಸ್ ನಾಯಕರು ನಿನ್ನೆ ಮಧ್ಯಾಹ್ನ ದೆಹಲಿಯಲ್ಲಿ ಮಾಂಸಾಹಾರ ಸೇವಿಸಿ ರಾತ್ರಿ ಸುತ್ತೂರು ಜಗದ್ಗುರುಗಳ ಗದ್ದುಗೆಗೆ ಭೇಟಿ ಕೊಟ್ಟ ಕುರಿತಂತೆ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, 'ಇದು ಬಹಳ ದುರದೃಷ್ಟಕರ. ಸಿದ್ದರಾಮಯ್ಯ ರಾಜ್ಯದ ಮುಖ್ಯಮಂತ್ರಿಗಳು ಎಂಬುದನ್ನು ಎಲ್ಲೋ ಒಂದು ಕಡೆ ಮರೆಯುತ್ತಿದ್ದಾರೆ ಎಂಬುದು ನನ್ನ ಭಾವನೆ.

ಇದು ಮೊದಲ ಬಾರಿ ಏನಲ್ಲ. ಹಲವು ಸಂದರ್ಭಗಳಲ್ಲಿ ಈ ರೀತಿ ಘಟನೆಗಳು ಪುನರಾವರ್ತನೆ ಆಗಿವೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ದೇವರ ಬಗ್ಗೆ ಎಷ್ಟು ಭಕ್ತಿ ಭಾವನೆ ಇಟ್ಟುಕೊಂಡಿದ್ದಾರೆ ಎಂಬುದು ಬೇರೆ ಮಾತು. ಆದ–'ರೆ, ರಾಜ್ಯದ ಮುಖ್ಯಮಂತ್ರಿಯಾಗಿ ಅವರ ನಡವಳಿಕೆಯನ್ನು ಸಮಾಜ, ಪ್ರತಿಯೊಬ್ಬರೂ ಗಮನಿಸುತ್ತಾರೆ. ಈ ಘಟನೆ ನಿಜವಾಗಿಯೂ ಖಂಡನೀಯ. ಅದರಲ್ಲೂ ಸುತ್ತೂರಿನ ಪವಿತ್ರ ಗದ್ದುಗೆಗೆ ಭೇಟಿ ಕೊಟ್ಟದ್ದು ನಿಜವಾಗಲೂ ಒಂದು ದುರಂತ' ಎಂದು ತಿಳಿಸಿದರು.

ಲೋಕಸಭಾ ಚುನಾವಣೆ ಸಂಬಂಧ ಸರ್ವೇ ಫಲಿತಾಂಶವೊಂದಕ್ಕೆ ಸಂಬಂಧಿಸಿದ ಪ್ರಶ್ನೆಗೆ ಉತ್ತರ ನೀಡಿದ ಅವರು, ಇಡೀ ದೇಶದಲ್ಲಿ ನರೇಂದ್ರ ಮೋದಿ ಅವರ ಪರವಾದ ಅಲೆ ಇದೆ. ಸಹಜವಾಗಿ ಬಿಜೆಪಿ ಪರವಾದ ವಾತಾವರಣ ನಿರ್ಮಾಣವಾಗಿದೆ. ದೇಶದ ಭವಿಷ್ಯದ ದೃಷ್ಟಿಯಿಂದ ನರೇಂದ್ರ ಮೋದಿಜೀ ಮತ್ತೊಮ್ಮೆ ಪ್ರಧಾನಿ ಆಗಬೇಕೆಂದು ದೇಶದ ಜನರಿಗೆ ಮನವರಿಕೆ ಆಗಿದೆ. ಕರ್ನಾಟಕದಲ್ಲಿ ಬಿಜೆಪಿ– ಜೆಡಿಎಸ್ ಒಗ್ಗಟ್ಟಾಗಿ ಎಲ್ಲ ಕ್ಷೇತ್ರಗಳನ್ನು ಗೆಲ್ಲಬೇಕೆಂಬ ಗುರಿ ಇಟ್ಟುಕೊಂಡಿದ್ದೇವೆ. 28 ಸೀಟುಗಳ ಮತ ಎಣಿಕೆ ಸಂದರ್ಭದಲ್ಲಿ ಒಂದೊಂದು ಸೀಟು ಗೆಲ್ಲಲು ಕೂಡ ಕಾಂಗ್ರೆಸ್ನವರು ಪರಿತಪಿಸುತ್ತಾರೆ. ಅಂಥ ವಾತಾವರಣ ಈಗಾಗಲೇ ನಿರ್ಮಾಣವಾಗಿದೆ. ನಮ್ಮ ಕಾರ್ಯಕರ್ತರು ರಣೋತ್ಸಾಹದಲ್ಲಿದ್ದಾರೆ. ಮೋದಿ ಮತ್ತೊಮ್ಮೆ ಎಂಬ ವಿಷಯದಲ್ಲಿ ಮತದಾರರೂ ಉತ್ಸಾಹದಲ್ಲಿದ್ದಾರೆ. ಬಿಜೆಪಿ–ಜೆಡಿಎಸ್ ಒಗ್ಗಟ್ಟಾಗಿ ಎಲ್ಲ ಕ್ಷೇತ್ರಗಳನ್ನು ಗೆಲ್ಲುವ ವಿಶ್ವಾಸ ಇದೆ ಎಂದು ತಿಳಿಸಿದರು.

## ಮಾನ್ಯ ಮುಖ್ಯಮಂತ್ರಿಗಳ ಜನತಾ ದರ್ಶನದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಡಿಸಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗಿ

ಧಾರವಾಡ: ಮಾನ್ಯ ಮುಖ್ಯಮಂತ್ರಿಗಳ ಮಹತ್ವದ ಜನತಾ ದರ್ಶನ ಕಾರ್ಯಕ್ರಮವು ಬೆಂಗಳೂರಿನಲ್ಲಿ ಫೆ.8ರಂದು ಯಶಸ್ವಿಯಾಗಿ ಆರಂಭವಾಯಿತು.

ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರನ್ನು ನೇರವಾಗಿ ಭೇಟಿ ಮಾಡಿ ಅಹವಾಲು ಸಲ್ಲಿಸುವ ಮಹತ್ವದ ಈ ಜನತಾ ದರ್ಶನ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಪಂ ಸಿಇಓ ಸೇರಿದಂತೆ ಜಿಲ್ಲಾ, ತಾಲೂಕು ಮಟ್ಟದ ಎಲ್ಲ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಿದ್ದಾರೆ.

ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿನ ವಿಡಿಯೋ ಕಾನ್ಫರೆನ್ಸ್ ಹಾಲ್ ನಲ್ಲಿ ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳಾದ ದಿವ್ಯ ಪ್ರಭು ಹಾಗೂ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಅವರು ಜನತಾ ದರ್ಶನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ. ಈ ಸಂದರ್ಭದಲ್ಲಿ ಎಸಿ, ತಹಸಿಲ್ದಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ಫೆ.9 ರಂದು ಕಾನೂನು ಅರಿವು-ನೆರವು ಕಾರ್ಯಕ್ರಮ

ಧಾರವಾಡ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಹಾಲು ಒಕ್ಕೂಟದ ಸಹಯೋಗದೊಂದಿಗೆ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಫೆಬ್ರುವರಿ 9 ರಂದು ಮಧ್ಯಾಹ್ನ 12 ಗಂಟೆಗೆ ಧಾರವಾಡ ಹಾಲು ಒಕ್ಕೂಟದಲ್ಲಿ ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ಎಫ್. ದೊಡ್ಡಮನಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಎನ್.ಎಸ್. ಕೊಡಿಯಾಲಮಠ ಅವರು ಅಧ್ಯಕ್ಷತೆ ವಹಿಸುವರು.

ಅತಿಥಿಗಳಾಗಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಬಸವರಾಜ ಹೆಗ್ಗನಾಯಕ, ಧಾರವಾಡ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತೆ ಎಸ್. ಶ್ವೇತಾ, ತಹಶೀಲ್ದಾರ ಡಿ. ಹೆಚ್. ಹೂಗಾರ, ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಲಲಿತಾ ಸಾತೇನಹಳ್ಳಿ, ಮಾರಿಕಾಂಬಾ ಹುಲಕೋಟಿ ಅವರು ಆಗಮಿಸುವರು.

ಹಿರಿಯ ಕಾರ್ಮಿಕ ನಿರೀಕ್ಷಕಿಯರಾದ ಭುವನೇಶ್ವರಿ ಕೋಟಿಮಠ, ಮೀನಾಕ್ಷಿ ಸಿಂದಿಹಟ್ಟಿ ಅವರು ಸ್ವಾಗತಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಠೇವಣಿ ಹಣ ಹಿಂದಿರುಗಿಸದ ಧಾರವಾಡ ವಿಕಾಸ ಅರ್ಬನ್ಕ್ರೆಡಿಟ್ ಸೊಸೈಟಿಗೆ ದಂಡವಿದಿಸಿ, ಪರಿಹಾರ ನೀಡಲು ಆದೇಶ

ಧಾರವಾಡ: ಧಾರವಾಡ ಕಮಲಾಪುರ ನಿವಾಸಿ ಅನ್ನಪೂರ್ಣಾ ಹುಲ್ಲಮನಿ ಎಂಬುವವರು ಎದುರುದಾರ ಧಾರವಾಡ ವಿಕಾಸ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ಲಿಮಿಟೆಡ್, ಸೊಸೈಟಿಯಲ್ಲಿ ದಿ:17/02/2020 ರಂದು ರೂ.1,50,000/- ಮತ್ತು ದಿ:07/05/2021 ರಂದು ರೂ.1,00,000/-ಗಳನ್ನು ಒಂದು ವರ್ಷದ ಅವಧಿಗೆ ಮುದ್ದತ್ತು ಠೇವಣಿ ಇಟ್ಟಿದ್ದರು. ಠೇವಣಿ ಅವಧಿ ಮುಗಿದ ಮೇಲೆ 2 ಠೇವಣಿಗಳ ಹಣಕೊಡುವಂತೆ ದೂರುದಾರರು ಹಲವು ಬಾರಿ ಎದುರುದಾರ ಸೊಸೈಟಿಯವರಿಗೆ ವಿನಂತಿಸಿದರೂ ಅವರು ಠೇವಣಿ ಹಣ ಅಥವಾ ಬಡ್ಡಿಯನ್ನು ವಾಪಸ್ಸುಕೊಟ್ಟಿರಲಿಲ್ಲ. ಅಂತಹ ಎದುರುದಾರ ಸೊಸೈಟಿಯವರ ನಡಾವಳಿಕೆಯಿಂದ ತನಗೆ ಮೋಸವಾಗಿದೆ ಮತ್ತು ಅವರು ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಎಸಗಿದ್ದಾರೆಂದು ಹೇಳಿ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು ದಿ:04/10/2023 ರಂದು ಧಾರವಾಡ ಜಿಲ್ಲಾಗ್ರಾಹಕರ ಆಯೋಗಕ್ಕೆ ಫಿರ್ಯಾದಿ ಸಲ್ಲಿಸಿದ್ದರು. ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ.ಭೂತೆ ಹಾಗೂ ವಿಶಾಲಾಕ್ಷಿ. ಅ. ಬೋಳಶೆಟ್ಟಿ ಮತ್ತು ಪ್ರಭು. ಸಿ. ಹಿರೇಮಠ ಸದಸ್ಯರು, ಠೇವಣಿ ಅವಧಿ ಮುಗಿದ ಮೇಲೆ ಕರಾರಿನಂತೆ ಬಡ್ಡಿ ಸಮೇತ ಠೇವಣಿದಾರರಿಗೆ ಹಣ ಹಿಂದಿರುಗಿಸುವುದು ಸೊಸೈಟಿಯ ಕರ್ತವ್ಯವಾಗಿದೆ. ಆದರೆ ಠೇವಣಿ ಅವದಿ ಮುಗಿದ ಸುಮಾರು 2-3 ವರ್ಷ ಕಳೆದರೂ ದೂರುದಾರರಿಗೆ ಠೇವಣಿ ಹಣ ಅಥವಾ ಅದರ ಮೇಲಿನ ಬಡ್ಡಿ ಹಿಂದಿರುಗಿಸದೇ ಇರುವ ಎದುರುದಾರ ಸೊಸೈಟಿಯವರ ನಡಾವಳಿಕೆ ಗ್ರಾಹಕರ ರಕ್ಷಣಾಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಆಯೋಗ ಅಭಿಪ್ರಯಾ ಪಟ್ಟು ತೀಪು ನೀಡಿದೆ. ದೂರುದಾರರಿಗೆ ಅವರ ಠೇವಣಿ ಹಣಒಟ್ಟು ರೂ.2,50,000/- ಮತ್ತು ಅದರ ಮೇಲೆ ಶೇ13.5% ರಂತೆ ಠೇವಣಿ ಇಟ್ಟ ದಿನಾಂಕದಿಂದ ಲೆಕ್ಕ ಹಾಕಿ ತೀಪು ನೀಡಿದ ಒಂದು ತಿಂಗಳ ಒಳಗಾಗಿ ಹಿಂದಿರುಗಿಸುವಂತೆ ಆಯೋಗ ಎದುರುದಾರ ಸೊಸೈಟಿಗೆ ನಿರ್ದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಹಾಗೂ ಮಾನಸಿಕ ಹಿಂಸೆಗಾಗಿ ರೂ.25,000/- ಪರಿಹಾರ ಮತ್ತು ಅವರ ಪ್ರಕರಣ ಖರ್ಚುವೆಚ್ಚ ಅಂತಾ ರೂ.10,000/-ಗಳನ್ನು ಕೊಡುವಂತೆ ಎದುರುದಾರ ಸೊಸೈಟಿಯವರಿಗೆ ಆಯೋಗ ಆದೇಶಿಸಿದೆ.

## ವಿಶೇಷ ಕೌಂಟರ್ ಆರಂಭ

ಶಿವಮೊಗ್ಗ: ಶಿವಮೊಗ್ಗ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನಿರ್ವಹಣಾ ವಿಭಾಗ ಮತ್ತು ಉಪವಿಭಾಗವು ದಿ: 11/02/2024 ರ ಭಾನುವಾರದಂದು 2023-24 ನೇ ಸಾಲಿನ ನೀರಿನ ಕಂದಾಯ ಮತ್ತು ಬಾಕಿ ಕಂದಾಯ ವಸೂಲಾತಿಗಾಗಿ ನಗರದ "ಅಶೋಕನಗರ ನಂದಿನಿ ಬೂತ್ ಪೊಲೀಸ್ ಕ್ವಾಟ್ರಸ್ ಹತ್ತಿರ, ಗಾಂಧೀನಗರ ಪಾರ್ಕ್ ಹತ್ತಿರ, ಕಾಶೀಪುರ ಕೆನರಾ ಬ್ಯಾಂಕ್ ಎದುರು, ಚಿಕ್ಕಲ್ ಶಿವನ ಪಾರ್ಕ್ ಹತ್ತಿರ ಮತ್ತು ರಾಮಣ್ಣ ಶ್ರೇಷ್ಠಿ ಪಾರ್ಕ್ ಹತ್ತಿರ" ಈ ಎಲ್ಲಾ ಕಡೆಗಳಲ್ಲಿ ವಿಶೇಷ ನೀರಿನ ಕಂದಾಯ ವಸೂಲಾತಿ ಕೌಂಟರ್ಗಳನ್ನು ತೆರೆಯಲಾಗಿದೆ.

ನೀರಿನ ಖಾತೆದಾರರು ಬಾಕಿ ಉಳಿಸಿಕೊಂಡಿರುವ ನೀರಿನ ಕಂದಾಯವನ್ನು ಪಾವತಿಸದಿದ್ದಲ್ಲಿ ನೀರಿನ ಸಂಪರ್ಕವನ್ನು ಕಡಿತಗೊಳಿಸುವುದು ಅನಿವಾರ್ಯವಾಗಲಿದೆ. ಸಾರ್ವಜನಿಕರು ಸಹಕರಿಸುವಂತೆ ಕರ್ನಾಟಕ ನಗರ ನೀರುಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುಚ್ಛಕ್ತಿ ದರ ಪರಿಷ್ಕರಣೆ- ಸಾರ್ವಜನಿಕ ಸಭೆ

ಶಿವಮೊಗ್ಗ: ವಿದ್ಯುಚ್ಛಕ್ತಿ ದರ ಪರಿಷ್ಕರಣೆ ಸಲುವಾಗಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗಕ್ಕೆ ಮ.ವಿ.ಸ.ಕಂಪೆನಿಯು ಅರ್ಜಿ ಸಲ್ಲಿಸಿರುವ ಹಿನ್ನಲೆಯಲ್ಲಿ ಸಾರ್ವಜನಿಕ ಅಭಿಪ್ರಾಯ ಸಂಗ್ರಹಿಸಲು ಆಯೋಗವು 'ಸಾರ್ವಜನಿಕ ವಿಚಾರಣೆ'ಯನ್ನು ದಿನಾಂಕ 12.02.2024ರಂದು ಸೋಮವಾರ ಬೆಳಿಗ್ಗೆ 10.00 ಗಂಟೆಯಿಂದ ಮೆಸ್ಕಾಂ ಕಾರ್ಪೊರೇಟ್ ಕಛೇರಿ ಸಭಾಂಗಣ, ಮೆಸ್ಕಾಂ ಭವನ, ಬಿಜೈ, ಮಂಗಳೂರು ಇಲ್ಲಿನಡೆಸಲಿರುವುದು. ಆಸಕ್ತ ಸಾರ್ವಜನಿಕರು ವಿಚಾರಣೆಯಲ್ಲಿ ಭಾಗವಹಿಸಬಹುದಾಗಿದೆ ಎಂದು ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ಯುಪಿಎ ಬಿಟ್ಟ ಸವಾಲುಗಳನ್ನು ಎನ್‌ಡಿಎ ದಿಟ್ಟವಾಗಿ ಎದುರಿಸಿದೆ: ದೇಶದ ಆರ್ಥಿಕತೆ ಕುರಿತು 'ಶ್ವೇತಪತ್ರ' ಮಂಡಿಸಿದ ನಿರ್ಮಲಾ ಸೀತಾರಾಮನ್



ನವದೆಹಲಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಗುರುವಾರ ಲೋಕಸಭೆಯಲ್ಲಿ 'ದೇಶದ ಆರ್ಥಿಕ ಪರಿಸ್ಥಿತಿ ಕುರಿತ ಶ್ವೇತಪತ್ರ'ವನ್ನು ಮಂಡಿಸಿದರು. ಹಿಂದಿನ ಕಾಂಗ್ರೆಸ್ ನೇತೃತ್ವದ ಯುಪಿಎ ಆಡಳಿತ 2004 ಮತ್ತು 2014 ರ ನಡುವೆ 10 ವರ್ಷಗಳ ವರ್ಷಗಳ ಅಧಿಕಾರಾವಧಿಯಲ್ಲಿ ರಾಷ್ಟ್ರ ಜಾಗತಿಕವಾಗಿ ಐದು ಆರ್ಥಿಕತೆಗಳ ಗುಂಪಿಗೆ ಸೇರಿದೆ ಎಂದು ಸರ್ಕಾರ ಪ್ರತಿಪಾದಿಸಿದೆ.

ಒಂದು ದಶಕದಲ್ಲಿ ಯುಪಿಎ ಸರ್ಕಾರ ಬಿಟ್ಟುಹೋದ ಸವಾಲುಗಳನ್ನು ಎನ್ ಡಿಎ ಸರ್ಕಾರ ಯಶಸ್ವಿಯಾಗಿ ನಿವಾರಿಸಿದೆ ಮತ್ತು ಭಾರತವನ್ನು ಸುಸ್ಥಿರ ಉನ್ನತ ಬೆಳವಣಿಗೆಯ ಹಾದಿಯಲ್ಲಿ ಇರಿಸಲು ಕಠಿಣ ನಿರ್ಧಾರಗಳನ್ನು ತೆಗೆದುಕೊಂಡಿದೆ ಎಂದು ಶ್ವೇತಪತ್ರದಲ್ಲಿ ತಿಳಿಸಲಾಗಿದೆ.

2014 ರಲ್ಲಿ ಮೋದಿ ಸರ್ಕಾರ ಅಧಿಕಾರ ವಹಿಸಿಕೊಂಡಾಗ, ಆರ್ಥಿಕತೆಯು "ದುರ್ಬಲ ಸ್ಥಿತಿಯಲ್ಲಿತ್ತು. ಸಾರ್ವಜನಿಕ ಹಣಕಾಸು ಕೆಟ್ಟ ಸ್ಥಿತಿಯಲ್ಲಿತ್ತು. ಹಣಕಾಸು ನಿರ್ವಹಣೆ ಸರಿಯಿರಲಿಲ್ಲ, ಹಣಕಾಸು ಆಶಿಸ್ತು ಮತ್ತು ವ್ಯಾಪಕ ಭ್ರಷ್ಟಾಚಾರವಿತ್ತು. ಇದು ಬಿಕ್ಕಟ್ಟಿನ ಪರಿಸ್ಥಿತಿಯಾಗಿತ್ತು. ಆರ್ಥಿಕತೆಯನ್ನು ಹಂತ ಹಂತವಾಗಿ ಸರಿಪಡಿಸುವ ಮತ್ತು ಆಡಳಿತ ವ್ಯವಸ್ಥೆಗಳನ್ನು ಕ್ರಮಬದ್ಧಗೊಳಿಸುವ ಜವಾಬ್ದಾರಿಯು ಅಗಾಧವಾಗಿತ್ತು ಎಂದು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸಂಸತ್ತಿನಲ್ಲಿ ಮಂಡಿಸಿದ 59 ಪುಟಗಳ ಶ್ವೇತಪತ್ರದಲ್ಲಿ ಹೇಳಲಾಗಿದೆ.

ಸರ್ಕಾರದ ಶ್ವೇತಪತ್ರದ ಪ್ರಕಾರ, 2014 ರಲ್ಲಿ ಭಾರತೀಯ ಆರ್ಥಿಕತೆಯು "ಬಿಕ್ಕಟ್ಟಿನಲ್ಲಿತ್ತು. ಆ ಸಮಯದಲ್ಲಿ ಶ್ವೇತಪತ್ರವನ್ನು ಬಿಡುಗಡೆ ಮಾಡಿದ್ದರೆ "ನಕಾರಾತ್ಮಕ ನಿರೂಪಣೆ" ಮತ್ತು "ಹೂಡಿಕೆದಾರರ ವಿಶ್ವಾಸವನ್ನು ಅಲುಗಾಡಿಸುವಂತಿತ್ತು. ಎನ್ ಡಿಎ ಸರ್ಕಾರ ರಾಜಕೀಯ ಮತ್ತು ಸ್ಥಿರತೆಯ ಲಾಭವನ್ನು ಪಡೆದುಕೊಂಡಿದ್ದು, ಹಿಂದಿನ ಯುಪಿಎ ಆಡಳಿತಕ್ಕಿಂತ ಭಿನ್ನವಾಗಿ ಹೆಚ್ಚಿನ ಆರ್ಥಿಕ ಒಳಿತು ಸಾಧಿಸುವ ಗುರಿಯೊಂದಿಗೆ "ಕಠಿಣ ನಿರ್ಧಾರಗಳನ್ನು ತೆಗೆದುಕೊಂಡಿತು. ಯುಪಿಎ ಸರ್ಕಾರ ಆರ್ಥಿಕ ಚಟುವಟಿಕೆಗಳನ್ನು ಸುಗಮಗೊಳಿಸಲು "ದಯನೀಯವಾಗಿ ವಿಫಲವಾಗಿ, ಆರ್ಥಿಕ ಅಭಿವೃದ್ಧಿಗೆ ಅಡೆತಡೆಗಳನ್ನು ಸೃಷ್ಟಿಸಿತ್ತು ಎಂದು ಶ್ವೇತಪತ್ರ ಹೇಳಿದೆ.

ಎನ್ ಡಿಎ ಸರ್ಕಾರದ ಆರ್ಥಿಕ ನಿರ್ವಹಣೆ ಹಾಗೂ ಉತ್ತಮ ಆಡಳಿತದಿಂದಾಗಿ 2014ರ ಹಿಂದಿನ ಯುಗದಲ್ಲಿನ ಎಲ್ಲಾ ಸವಾಲುಗಳನ್ನು ಯಶಸ್ವಿಯಾಗಿ ಮೆಟ್ಟಿ ನಿಲ್ಲಲಾಗಿದೆ. 2047ರೊಳಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಬೇಕಾಗಿರುವುದಿಂದ ಅನೇಕ ಕ್ರಮ ಕೈಗೊಳ್ಳಲಾಗಿದೆ. ಯುದ್ಧ ವಿಮಾನಗಳು, ಜಲಾಂತರ್ಗಾಮಿ ನೌಕೆಗಳು, ರಾತ್ರಿ ಹೋರಾಟದ ಗೇರ್‌ಗಳು ಮತ್ತು ವಿವಿಧ ಉಪಕರಣಗಳ ನವೀಕರಣ ಮತ್ತು ಸ್ವಾಧೀನಕ್ಕೆ ಸರ್ಕಾರದಿಂದ ವಿಳಂಬವಾಗಿರುವುದಾಗಿಯೂ ಶ್ವೇತಪತ್ರದಲ್ಲಿ ಉಲ್ಲೇಖಿಸಲಾಗಿದೆ.

## ನಾನು ಕೂಡ ಕೊಡಗು-ಮೈಸೂರು ಕ್ಷೇತ್ರದ ಆಕಾಂಕ್ಷಿ: ವಿಶ್ವನಾಥ್



ಮಡಿಕೇರಿ: ಲೋಕಸಭಾ ಚುನಾವಣೆಗೆ ಕಾಂಗ್ರೆಸ್‌ನಿಂದ ಸ್ಪರ್ಧಿಸಲು ನಾನು ಕೂಡ ಆಕಾಂಕ್ಷಿ. ನನ್ನ ಅನುಭವ ಪರಿಗಣಿಸಿ ಟಿಕೆಟ್ ನೀಡಿದರೆ ಸ್ಪರ್ಧಿಸಲು ಸಿದ್ಧ ಎಂದು ವಿಧಾನ ಪರಿಷತ್ ಸದಸ್ಯ ಅಡಗೂರು ಎಚ್ ವಿಶ್ವನಾಥ್ ಹೇಳಿದ್ದಾರೆ.

ಮಡಿಕೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಕೊಡಗು-ಮೈಸೂರು ಕ್ಷೇತ್ರದ ಸಂಸದ ಸ್ಥಾನದ ಆಕಾಂಕ್ಷಿ. ಇದೇ ವಿಚಾರವಾಗಿ ಎಐಸಿಸಿ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಮಾತನಾಡಿದ್ದೇನೆ. ರಾಜ್ಯಪಾಲರು ನನ್ನನ್ನು ಎಂಎಲ್‌ಸಿಯನ್ನಾಗಿ ನಾಮನಿರ್ದೇಶನ ಮಾಡಿದ್ದಾರೆ ಮತ್ತು ನಾನು ಯಾವುದೇ ರಾಜಕೀಯ ಪಕ್ಷಕ್ಕೆ ಸೇರಿಲ್ಲ ಎಂದು ಹೇಳಿದ್ದಾರೆ.

ಇದೇ ವೇಳೆ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಕೇಂದ್ರ ಸರ್ಕಾರ ಜಾರಿ ನಿರ್ದೇಶನಾಲಯವನ್ನು ಬಳಸಿಕೊಂಡು ವಿರೋಧ ಪಕ್ಷಗಳಿಗೆ ಕಿರುಕುಳ ನೀಡುತ್ತಿದೆ ಎಂದು ಆರೋಪಿಸಿದರು. ಬಿಜೆಪಿ ದ್ವೇಷ ಮತ್ತು ಧರ್ಮ ರಾಜಕಾರಣದಲ್ಲಿ ತೊಡಗಿದೆ ಎಂದು ಆರೋಪಿಸಿದರು. ನೆಹರೂ ಅವರ ಮಾತನ್ನು ತಪ್ಪಾಗಿ ಅರ್ಥೈಸಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಭಾರತಕ್ಕೆ ಸ್ವಾತಂತ್ರ್ಯ ಬಂದಾಗ 33 ಕೋಟಿ ಜನರಿಗೆ ಅನ್ನ ಇರಲಿಲ್ಲ. ಪಂಚವಾರ್ಷಿಕ ಯೋಜನೆಗಳು ಮತ್ತು ಇತರ ಅಭಿವೃದ್ಧಿ ಯೋಜನೆಗಳ ಮೂಲಕ ನೆಹರು ದೇಶವನ್ನು ಅಭಿವೃದ್ಧಿ ಪಡಿಸಿದರು ಎಂದರು. ಕೇಂದ್ರ ಸರ್ಕಾರದ ವಿರುದ್ಧ ದೆಹಲಿಯಲ್ಲಿ ಪ್ರತಿಭಟನೆ ನಡೆಸುತ್ತಿರುವ ರಾಜ್ಯ ಸರ್ಕಾರದ ಕ್ರಮದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕರ್ನಾಟಕವು ಅತಿ ಹೆಚ್ಚು ತೆರಿಗೆ ಪಾವತಿಸುತ್ತದೆ ಮತ್ತು ಕೇಂದ್ರವು ಜನರ ಹಣವನ್ನು ಇತರರಿಗೆ ಹಂಚುತ್ತಿದೆ ಎಂದು ಆರೋಪಿಸಿದರು. ರಾಜ್ಯದ ಬಿಜೆಪಿ ಸಂಸದರಿಗೆ ಈ ಬಗ್ಗೆ ಕಾಳಜಿ ಇಲ್ಲ. ದಕ್ಷಿಣ ಭಾರತದ ಹಣ ಉತ್ತರಕ್ಕೆ ಹರಿಯುತ್ತಿದೆ. ಶ್ರೀರಾಮ ಈ ದೇಶದ ಅಸ್ಮಿತೆಯಾಗಿದ್ದು, ಅವರು ಬಿಜೆಪಿಗೆ ಸೀಮಿತವಾಗಿಲ್ಲ ಎಂದು ಹೇಳಿದ್ದಾರೆ.

## ಮುಖ್ಯಮಂತ್ರಿಗಳ ಜನ ಸ್ಪಂದನ ಕಾರ್ಯಕ್ರಮ: ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗಿ



ಬಳ್ಳಾರಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಮಹತ್ವವಾದ ಜನ ಸ್ಪಂದನ ಕಾರ್ಯಕ್ರಮವನ್ನು ಬೆಂಗಳೂರಿನ ಶಕ್ತಿಕೇಂದ್ರ ವಿಧಾನಸೌಧ ಆವರಣದಲ್ಲಿ ಆಯೋಜಿಸಲಾಗಿತ್ತು.

ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರನ್ನು ನೇರವಾಗಿ ಭೇಟಿ ಮಾಡಿ ಅಹವಾಲು ಸಲ್ಲಿಸುವ ಮಹತ್ವದ ಈ ಜನ ಸ್ಪಂದನ ಕಾರ್ಯಕ್ರಮದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಿದ್ದರು.

ಅದರಂತೆ, ಬಳ್ಳಾರಿ ನಗರದ ಜಿಲ್ಲಾಡಳಿತ ಕಚೇರಿ ಕೆಸ್ವಾನ್ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತರಾದ ಹೇಮಂತ್.ಎನ್ ಅವರು ಜನಸ್ಪಂದನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಫೆ.09 ರಂದು 'ಸಂವಿಧಾನ ನಡಿಗೆ' ಬೆಟ್ಟ ಹತ್ತುವ ಕಾರ್ಯಕ್ರಮ

ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸಂವಿಧಾನದ 75ನೇ ವರ್ಷಾಚರಣೆ ಪ್ರಯುಕ್ತ 'ಸಂವಿಧಾನ ಜಾಗೃತಿ ಜಾಥಾ' ಅಂಗವಾಗಿ 'ಸಂವಿಧಾನ ನಡಿಗೆ'ಯನ್ನು ಫೆ.09 ರಂದು ಬೆಳಿಗ್ಗೆ 06.30 ಗಂಟೆಯಿಂದ 09.30 ರ ವರೆಗೆ ನಗರದ ಕೋಟೆ ಪ್ರದೇಶದ ಬೆಟ್ಟ ಹತ್ತುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸತೀಶ್ ಅವರು ತಿಳಿಸಿದ್ದಾರೆ.

ಈ ನಡಿಗೆಯಲ್ಲಿ ಜಿಲ್ಲಾಧಿಕಾರಿಗಳು, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಅಪರ ಜಿಲ್ಲಾಧಿಕಾರಿಗಳು ಸೇರಿದಂತೆ 100 ಕ್ಕೂ ಹೆಚ್ಚು ಜನ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಮತ್ತು 200 ಜನ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸೇರಿದಂತೆ 300 ಕ್ಕೂ ಹೆಚ್ಚು ಜನ ಭಾಗವಹಿಸುವರು. ಪ್ರತಿಯೊಬ್ಬರೂ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸತೀಶ್ ಜಾರಕಿಹೊಳಿ ಫೌಂಡೇಶನಿಂದ ಬಾಂಡೆ ಸಾಮಗ್ರಿ, ಸೌಂಡ್ ಸಿಸ್ಟಮ್, ಕುರ್ಚಿ ವಿತರಿಸಿದ ರಾಹುಲ್ ಜಾರಕಿಹೊಳಿ



ಗೋಕಾಕ: ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಬಾಂಡೆ ಸಾಮಗ್ರಿಗಳು ಹಾಗೂ ಕುರ್ಚಿ, ಸೌಂಡ್ ಸಿಸ್ಟಮ್ ಗಳನ್ನು ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ವಿತರಿಸಿದರು.

ನಗರದ ಹಿಲ್ ಗಾರ್ಡನ್ ಕಛೇರಿಯಲ್ಲಿ ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ವ್ಯಾಪ್ತಿಗೆ ಬರುವ ವಿವಿಧ ಕ್ಷೇತ್ರಗಳಲ್ಲಿ, ಊರು ಗ್ರಾಮಗಳಿಗೆ ಎಲ್ಲಾ ಸಮುದಾಯ ಭವನಗಳಿಗೆ, ದೇವಸ್ಥಾನಗಳಿಗೆ, ಮಸೀದಿ, ಚರ್ಚಗಳಿಗೆ ಸೇರಿದಂತೆ ಸಾಮಾಜಿಕ ಕಾರ್ಯಗಳಿಗೆ ಅನುಕೂಲವಾಗುವಂತೆ ಬಾಂಡೆ ಸಾಮಗ್ರಿಗಳು ಹಾಗೂ ಕುರ್ಚಿ ಸೌಂಡ್ ಸಿಸ್ಟಮ್ ವಿತರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ವಿ.ಆರ್. ಪರಸನ್ನವರ, ರವಿಂದ್ರ ನಾಯ್ಕರ್, ಮಹಾಂತೇಶ ಮುಗದುಮ, ಲಗಮಣ್ಣಾ ಕಳಸನ್ನವರ, ಸಿದ್ದು ಸುಣಗಾರ, ಪಾಂಡು ಮನ್ನಿಕೇರಿ, ಅರವಿಂದ್ ಕಾರ್ಚಿ, ಪಾಂಡು ರಂಗಸುಭೆ, ಮಾರುತಿ ಗುಟಗುದ್ದಿ, ಪ್ರಕಾಶ್ ಬಸಾಪುರ ಹಾಗೂ ಅನೇಕ ಸಮಾಜದ ಹಿರಿಯರು, ಮುಖಂಡರು, ಕಾರ್ಯಕರ್ತರು, ರೈತರು, ಯುವಕರು ಸೇರಿದಂತೆ ಹಿಲ್ ಗಾರ್ಡನ್ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಲಿವ್ ಇನ್ ಸಂಗಾತಿಯ ಲವ್ ದೋಖಾ: ಯುವಕ ಆತ್ಮಹತ್ಯೆ



ಬೆಂಗಳೂರು: ಬುದ್ಧಿ ಹೇಳಿದರೂ ಇನ್ನೊಂದು ಅಕ್ರಮ ಸಂಬಂಧ ಬಿಡದ ವಿಚ್ಛೇದಿತ ಲಿವ್ ಇನ್ ಸಂಗಾತಿಯ ನಡೆಯಿಂದ ನೊಂದ ಯುವಕನೊಬ್ಬ ಆತ್ಮಹತ್ಯೆಗೆ ಶರಣಾಗಿದ್ದಾನೆ.

ಅನ್ಬರಸನ್ ಆತ್ಮಹತ್ಯೆ ಮಾಡಿಕೊಂಡ ಯುವಕ. ಬೇರೆಯವರ ಪ್ರಚೋದನೆಯಿಂದ ಮಗ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಅನ್ಬರಸನ್ ಪೋಷಕರು ದೂರು ದಾಖಲಿಸಿದ್ದಾರೆ.

ಆರು ತಿಂಗಳಿನಿಂದ ಚಿಕ್ಕನಾಗಮಂಗಲದ ಬಾಡಿಗೆ ಮನೆಯೊಂದರಲ್ಲಿ ಅನ್ಬರಸನ್ ಮತ್ತು ಸವಿತಾ (ಹೆಸರು ಬದಲಿಸಲಾಗಿದೆ) ವಾಸವಾಗಿದ್ದರು. ಗಂಡ-ಹೆಂಡತಿ ಎಂದು ಹೇಳಿ ಅನ್ಬರಸನ್ ಮತ್ತು ಸವಿತಾ ಬಾಡಿಗೆ ಮನೆ ಪಡೆದುಕೊಂಡಿದ್ದರು. ಸವಿತಾ ಐಟಿ ಕಂಪನಿಯ ಉದ್ಯೋಗಿಯಾಗಿದ್ರೆ, ಅನ್ಬರಸನ್ ಖಾಸಗಿ ಕಂಪನಿಯಲ್ಲಿ ಮ್ಯಾನೇಜರ್ ಆಗಿ ಕೆಲಸ ಮಾಡಿಕೊಂಡಿದ್ದ.

ಮೊದಲ ಗಂಡನಿಂದ ವಿಚ್ಛೇದನ ಪಡೆದುಕೊಂಡಿದ್ದ ಸವಿತಾ ಕಳೆದ ಆರು ತಿಂಗಳಿನಿಂದ ಅನ್ಬರಸನ್ ಜತೆ ವಾಸವಾಗಿದ್ದಳು. ಆದರೆ ಇತ್ತೀಚೆಗೆ ಸಂತೋಷ್ ಎಂಬಾತನ ಜತೆಯಲ್ಲೂ ಸವಿತಾ ಸುತ್ತಾಡುತ್ತಿದ್ದಳು ಎನ್ನಲಾಗಿದೆ.

ರಾತ್ರಿ ಮನೆಯಲ್ಲಿ ಸಂತೋಷ್ ಜತೆಯಲ್ಲಿರುವಾಗಲೇ ಸವಿತಾಳನ್ನು ಅನ್ಬರಸನ್ ರೆಡ್ಹ್ಯಾಂಡ್ ಆಗಿ ಹಿಡಿದಿದ್ದ. ಈ ಸಮಯದಲ್ಲಿ ಸುಮತಿಗೆ ಹೀಗೆಲ್ಲಾ ಮಾಡದಂತೆ ತಿಳಿ ಹೇಳಿದ್ದ ಎನ್ನಲಾಗಿದೆ. ಆದರೆ ಸವಿತಾ ತನ್ನ ಹಳೇ ಚಾಳಿ ಮುಂದುವರಿಸಿದ್ದಳು. ಇದರಿಂದ ಮನನೊಂದ ಅನ್ಬರಸನ್ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೋಷಕರು ಆರೋಪಿಸಿದ್ದಾರೆ. ಈ ಆತ್ಮಹತ್ಯೆಗೆ ಸವಿತಾ ಹಾಗೂ ಸಂತೋಷ್ ಪ್ರಚೋದನೆ ಕಾರಣ ಎಂದು ಪೋಷಕರು ಅವರಿಬ್ಬರ ಆಡಿಯೋ ಸಂಭಾಷಣೆ ಆಧರಿಸಿ ದೂರು ನೀಡಿದ್ದಾರೆ.

## ಸಿರುಗುಪ್ಪದ ವಿದ್ಯಾ ಎಲ್ ಬೈಲಪತ್ತಾರ್‌ಗೆ ಬಿಎ ಪದವಿಯಲ್ಲಿ 3ನೇ ರ್‍ಯಾಂಕ್



ಬಳ್ಳಾರಿ: ಬಳ್ಳಾರಿಯ ವಿಜಯನಗರ ಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಪದವಿ ವಿಭಾಗದ ಫಲಿತಾಂಶ ಪ್ರಕಟವಾಗಿದೆ. ಸಿರುಗುಪ್ಪ ಪಟ್ಟಣದ ವಿದ್ಯಾ ಎಲ್ ಬೈಲಪತ್ತಾರ್ ಅವರು ಬಿ.ಎ.ಪದವಿಯಲ್ಲಿ 3ನೇ ರ್‍ಯಾಂಕ್ ಪಡೆದಿದ್ದಾರೆ.

ಸಿರುಗುಪ್ಪ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿನಿಯಾಗಿರುವ ವಿದ್ಯಾ ಅವರು 3 ವರ್ಷದ ಬಿ.ಎ.ಪದವಿಯಲ್ಲಿ ಎಲ್ಲಾ ಸೆಮಿಸ್ಟರ್‌ಗಳು ಒಟ್ಟು 4100 ಅಂಕಗಳಿಗೆ 3721 ಅಂಕ ಗಳಿಸಿದ್ದಾರೆ.

ಶೇ.90.76 ಪ್ರತಿಶತ ಸಾಧನೆ ತೋರಿರುವ ವಿದ್ಯಾ ಎಲ್ ಬೈಲಪತ್ತಾರ್ ಅವರಿಗೆ ಕಾಲೇಜಿನ ಪ್ರಾಂಶುಪಾಲರು ಅಭಿನಂದನೆ ಸಲ್ಲಿಸಿದ್ದಾರೆ. ಮಗಳ ಸಾಧನೆಯ ಬಗ್ಗೆ ತಂದೆ ಲಕ್ಷ್ಮಣ ಬೈಲಪತ್ತಾರ್ ಸೇರಿದಂತೆ ಕುಟುಂಬ ವರ್ಗ, ಬಂಧು ಮಿತ್ರರು ಸಂತಸ ವ್ಯಕ್ತಪಡಿಸಿದ್ದಾರೆ.

# ಸಂವಿಧಾನ ಜಾಗೃತಿ ಜಾಥಾ: ಸಂವಿಧಾನ ಮೌಲ್ಯಗಳ ಸ್ಮರಣೆ, ವಿವಿಧೆಡೆ ಅದ್ದೂರಿ ಸ್ವಾಗತ



ಬಳ್ಳಾರಿ: ಜಿಲ್ಲೆಯಲ್ಲಿ "ಸಂವಿಧಾನ ಜಾಗೃತಿ ಜಾಥಾ" ಸಂಚಾರ ಮುಂದುವರೆದ ಹಿನ್ನಲೆಯಲ್ಲಿ ಬುಧವಾರ ಸಿರುಗುಪ್ಪ ತಾಲ್ಲೂಕಿನ ಕೆಂಚನಗುಡ್ಡ, ನಡಿವಿ, ಎಂ.ಸೂಗೂರು, ಮುದ್ದಟನೂರು ಹಾಗೂ ಸಿರಿಗೇರಿ ಗ್ರಾಮಗಳ ಗ್ರಾಮ ಪಂಚಾಯಿತಿಗಳ ಮಾರ್ಗದಲ್ಲಿ ಸಂಚರಿಸಿತು.

ಕೆಂಚನಗುಡ್ಡ ಗ್ರಾಮದಲ್ಲಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಲಂಬಾಣಿ ನೃತ್ಯದ ಮೂಲಕ ಹಾಗೂ ಗ್ರಾಮಸ್ಥರು ಪಟಾಕಿಗಳನ್ನು ಸಿಡಿಸುವ ಮೂಲಕ ಜಾಥಾವನ್ನು ಸ್ವಾಗತಿಸಿದ್ದು ವಿಶೇಷವಾಗಿತ್ತು. ಗ್ರಾಮ ಪಂಚಾಯಿತಿಯ ವತಿಯಿಂದ ಬಲೂನುಗಳನ್ನು ಹಾರಿಸಲಾಯಿತು. ಮಾರ್ಗದಲ್ಲಿ ಹೆರಕಲ್ಲು, ನಿಟ್ಟೂರು ಹಾಗೂ ಉಡೇಗೋಳ ಗ್ರಾಮಗಳಲ್ಲಿ ಜಾಥಾವನ್ನು ಸ್ವಾಗತಿಸಿ ಡಾ.ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೆ ಪೂಜೆ ಸಲ್ಲಿಸಲಾಯಿತು.

ನಡಿವಿ ಗ್ರಾಮದಲ್ಲಿ ಜಾಥಾಗೆ ವಿಶೇಷವಾಗಿ ಎತ್ತಿನ ಬಂಡಿಗಳು, ಪೂರ್ಣ ಕುಂಭ ಹಾಗೂ ಕಳಶ ಹಿಡಿದ ಮಹಿಳೆಯರು ಸ್ವಾಗತಿಸಿದರು. ಕಿತ್ತೂರು ರಾಣಿ ಚೆನ್ನಮ್ಮ ಶಾಲೆಯ ವಿದ್ಯಾರ್ಥಿನಿಯರು ಲೇಜಿಮ್ ಹಾಗೂ ಡೊಳ್ಳು ಬಾರಿಸುವ ಮೂಲಕ ಜನ ಮನ ಸೆಳೆಯುವ ಪ್ರದರ್ಶನ ನೀಡಿದರು. ಮೊರಾರ್ಜಿ ದೇಸಾಯಿ ಶಾಲೆಯ ವಿದ್ಯಾರ್ಥಿನಿಯರು ಸೈನಿಕರ ವೇಷದಲ್ಲಿ ಅತ್ಯುತ್ತಮವಾಗಿ ಪಥ ಸಂಚಲನ ಮಾಡಿದರು.

ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಮೂಲಕ ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು. ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ಈ ವೇಳೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಮತ್ತು ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು, ಗ್ರಾಮ ಪಂಚಾಯಿತಿಗಳ ಜನಪ್ರತಿನಿಧಿಗಳು, ಕಳಶ ಹಿಡಿದ ಹಾಗೂ ಪೂರ್ಣ ಕುಂಭ ಹೊತ್ತ ಮಹಿಳೆಯರು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

# ನದಿ ತೀರದಲ್ಲಿ ವಾಮಾಚಾರ
## ನೀರಲ್ಲಿ ತೇಲಿ ಬಂದವು ಶವಗಳು



ಚಿಕ್ಕಮಗಳೂರು : ಚಿಕ್ಕಮಗಳೂರಿನ ಭದ್ರಾ ನದಿಯ ದಡದಲ್ಲಿ ನಡು ರಾತ್ರಿಯ ವೇಳೆ ಭಯಂಕರವಾಗಿ ವಾಮಾಚಾರ ನಡೆಸಿ, ನಾಲ್ಕು ಕುರಿಗಳನ್ನು ಬಲಿ ಕೊಟ್ಟಿರುವ ಘಟನೆ ನಡೆದಿದೆ.

ಚಿಕ್ಕಮಗಳೂರು ಕಳಸ ತಾಲೂಕಿನಲ್ಲಿರುವ ಕಳಸ–ಹೊರನಾಡು ಸಂಪರ್ಕಿಸುವ ಹೆಬ್ಬಾಳೆ ಸೇತುವೆ ಬಳಿಯ ಭದ್ರಾ ನದಿಯ ತೀರದಲ್ಲಿ ಈ ವಾಮಾಚಾರ ಮಾಡಲಾಗಿದೆ.

ಕಿಡಿಗೇಡಿಗಳು ರಾತ್ರೋರಾತ್ರಿ ಆಗಮಿಸಿ ನದಿ ತೀರಕ್ಕೆ ಬಂದು ಪೂಜೆ ಮಾಡಿ ಕುರಿ ಬಲಿ ಕೊಟ್ಟಿದ್ದಾರೆ. ಇದನ್ನು ಕಂಡ ಸ್ಥಳೀಯರು ಪ್ರವಾಸಿಗರು ಬೆಚ್ಚಿಬಿದ್ದಿದ್ದಾರೆ.

ವಾಮಾಚಾರಕ್ಕಾಗಿ ಪೂಜೆ ನಡೆಸಿ ಕುರಿ ಬಲಿ ನೀಡಿರುವ ಶಂಕೆ ವ್ಯಕ್ತವಾಗಿದೆ. ಕಿಡಿಗೇಡಿಗಳು ನದಿ ದಂಡೆಯಲ್ಲಿ ಕುರಿ ಕಡಿದು ನದಿಗೆ ಎಸೆದಿದ್ದಾರೆ.

ಭದ್ರಾ ನದಿಯಲ್ಲಿ ನಾಲ್ಕು ಕುರಿಗಳು ತೇಲುತ್ತಿರುವ ಸ್ಥಿತಿಯಲ್ಲಿ ಪತ್ತೆಯಾಗಿವೆ. ಅಲ್ಲದೇ ದಂಡೆಯಲ್ಲಿ ಅರಿಶಿಣ, ಕುಂಕುಮ,ಕೂದಲು, ಉಗುರು, ಮಣ್ಣಿನ ಬೊಂಬೆಗಳು, ರಕ್ತ, ಬಟ್ಟೆ, ಮಡಕೆಗಳು ಪತ್ತೆಯಾಗಿವೆ.

ಸ್ಥಳಕ್ಕೆ ಕಳಸ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕುರಿಗಳ ಮೃತದೇಹವನ್ನು ಹೊರಕ್ಕೆ ತೆಗೆದಿದ್ದು, ವಾಮಾಚಾರ ಮಾಡಿದವರ ಹುಡುಕಾಟ ಆರಂಭಿಸಿದ್ದಾರೆ.

# ಸಂವಿಧಾನ ಜಾಗೃತಿ ಜಾಥಾ




ಶಿವಮೊಗ್ಗ: ಸಾಗರ ತಾಲ್ಲೂಕಿನ ಕಾನಲೆ ಗ್ರಾ.ಪಂ ಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಇಂದು ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ನಡೆಸಲಾಯಿತು.

ಕಾನಲೆ ಗ್ರಾ.ಪಂ ಅಧ್ಯಕ್ಷರಾದ ಜಾನಕಕೀ ರಾಮಕೃಷ್ಣ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಶಿಕ್ಷಕಿ ಪೂರ್ಣಿಮಾ ಉಪನ್ಯಾಸ ನೀಡಿದರು. ಈ ವೇಳೆ ಶಿಕ್ಷಕರು, ವಿದ್ಯಾರ್ಥಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.

## ಸೈದೂರಿನಲ್ಲಿ ಸಂವಿಧಾನ ಜಾಗೃತಿ ಜಾಥಾ



ಶಿವಮೊಗ್ಗ: ಸಾಗರ ತಾಲ್ಲೂಕಿನ ಸೈದೂರು ಗ್ರಾ.ಪಂ ಯಲ್ಲಿ ಭಾರತ ಸಂವಿಧಾನ ಅಂಗೀರಿಸಿದ 75 ನೇ ವರ್ಷಾಚರಣೆ ಪ್ರಯುಕ್ತ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಸಮಾಜ ಕಲ್ಯಾಣ ಇಲಾಖೆ ಹಾಗೂ ಗ್ರಾ.ಪಂ ಸಹಯೋಗದಲ್ಲಿ ಕೈಗೊಳ್ಳಲಾಯಿತು. ಗ್ರಾ.ಪಂ ಉಪಾಧ್ಯಕ್ಷ ಶಿವಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಶಿಕ್ಷಕ ಯಮನೂರಪ್ಪ ಉಪನ್ಯಾಸ ನೀಡಿದರು. ವಿವಿಧ ಶಾಲೆಗಳ ಶಿಕ್ಷಕರು, ವಿದ್ಯಾರ್ಥಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.

# ಮೋದಿ ಮತ್ತೇ ಪ್ರಧಾನಿಯಾದರೆ ಭಾರತ ಪ್ರಪಂಚದಲ್ಲಿಯೇ ಶಕ್ತಿ ಶಾಲಿ ರಾಷ್ಟ್ರವಾಗಲಿದೆ: ಶಾಸಕ ಬಾಲಚಂದ್ರ ಜಾರಕಿಹೊಳಿ

ಗೋಕಾಕ: ಭಾರತವು ಮತ್ತಷ್ಟು ಗಟ್ಟಿಯಾಗಲು ನರೇಂದ್ರ ಮೋದಿಯವರು ಮತ್ತೊಮ್ಮೆ ನಮ್ಮ ರಾಷ್ಟ್ರದ ಪ್ರಧಾನಿಯಾಗಬೇಕು. ಮತ್ತೊಮ್ಮೆ ಮೋದಿಯವರಿಗಾಗಿ ಕಾರ್ಯಕರ್ತರು ಪ್ರತಿ ಮನೆ–ಮನೆ ಬಾಗಿಲಿಗೆ ತೆರಳಿ ಕೇಂದ್ರ ಸರ್ಕಾರದ ಯೋಜನೆಗಳನ್ನು ವಿವರಿಸಬೇಕು. ಬರುವ ಮಾರ್ಚ–ಎಪ್ರೀಲ್ ತಿಂಗಳಲ್ಲಿ ಜರುಗುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಕಾರ್ಯಕರ್ತರು ಶ್ರಮಿಸುವಂತೆ ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಕರೆ ನೀಡಿದರು.

ಬುಧವಾರದಂದು ನಗರದ ಎನ್–ಎಸ್‌ಎಫ್ ಕಚೇರಿಯಲ್ಲಿ ಗೋಕಾಕ ಮತ್ತು ಅರಭಾವಿ ಮಂಡಲ ಜಂಟಿಯಾಗಿ ಹಮ್ಮಿಕೊಂಡಿದ್ದ ಗ್ರಾಮ ಚಲೋ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶಕ್ಕೆ ನರೇಂದ್ರ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗಬೇಕೆಂಬುವುದು ಇಡೀ ದೇಶದ ನಾಗರೀಕರ ಆಶಯವಾಗಿದೆ ಎಂದು ಹೇಳಿದರು.




ಪ್ರಧಾನಿಯಾಗಿ ಮೋದಿಯವರು ಎರಡು ಅವಧಿಯನ್ನು ಯಶಸ್ವಿಯಾಗಿ ಪೂರೈಸುತ್ತಿದ್ದಾರೆ. ಅವರು ಜಾರಿಗೊಳಿಸಿರುವ ನೂರಾರು ಜನೋಪಯೋಗಿಯ ಯೋಜನೆಗಳು ಜನರ ಮನೆ ಬಾಗಿಲಿಗೆ ತಲುಪಿವೆ. ವಿಶ್ವದಲ್ಲಿಯೇ ಭಾರತ ಸಶಕ್ತ ಹಾಗೂ ಬಲಿಷ್ಠ ರಾಷ್ಟ್ರವಾಗಲು ಕಾರಣರಾಗಿದ್ದಾರೆ. ಮೋದಿಯವರಿಂದ ಜಗತ್ತಿನ ಬಲಾಢ್ಯ ರಾಷ್ಟ್ರಗಳು ಪ್ರೇರಣೆಗೊಂಡು ಭಾರತದ ಮಾದರಿಯಲ್ಲಿ ಆಡಳಿತ ನಡೆಸುತ್ತಿವೆ. ಜೆಜೆಎಮ್, ಆಯುಷ್ಮಾನ ಭಾರತ, ಉಜ್ವಲಾ ಯೋಜನೆ, ಕಿಸಾನ್ ಸಮ್ಮಾನ, ಪಿಎಮ್ ವಿಶ್ವಕರ್ಮ ಯೋಜನೆ, ನಾರಿ ಶಕ್ತಿ ಸೇರಿದಂತೆ ನೂರಾರು ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದ್ದಾರೆ ಎಂದು ಕೇಂದ್ರ ಸರ್ಕಾರದ ಸಾಧನೆಗಳನ್ನು ವಿವರಿಸಿದರು.

ಅರಭಾವಿ ಮತಕ್ಷೇತ್ರಕ್ಕೆ ಪ್ರಧಾನಿಯವರ ಮಹತ್ವಾಕಾಂಕ್ಷೆಯ ಶುದ್ಧ ಕುಡಿಯುವ ನೀರಿನ ಜಲ ಜೀವನ ಮೀಷನ್ ಕಾಮಗಾರಿ ಪ್ರಗತಿಯಲ್ಲಿದೆ. ಇದಕ್ಕಾಗಿ ಅರಭಾವಿ ಕ್ಷೇತ್ರಕ್ಕೆ 438 ಕೋಟಿ ರೂಗಳ ಅನುದಾನ ಬಿಡುಗಡೆಯಾಗಿದ್ದು ಕ್ಷೇತ್ರದ ಪ್ರತಿ ಮನೆ–ಮನೆಗೆ ನಳಗಳನ್ನು ಅಳವಡಿಸಲಾಗುತ್ತಿದೆ. ಅರಭಾವಿ, ಕಲ್ಲೋಳ್ಳಿ, ನಾಗನೂರ ಪ.ಪಂ ಮತ್ತು ಮೂಡಲಗಿ ಪುರಸಭೆಗೆ ಕುಡಿಯುವ ನೀರಿಗಾಗಿ 140 ಕೋಟಿ ರೂಗಳ ಅನುದಾನ ಬಂದಿದೆ. ಕೇಂದ್ರ ಸರ್ಕಾರದ ಎಲ್ಲ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಇವುಗಳನ್ನು ಮತದಾರರಿಗೆ ಮನವರಿಕೆ ಮಾಡಿಕೊಡಲು ಕಾರ್ಯಕರ್ತರು ಸಿದ್ದರಾಗುವಂತೆ ಅವರು ಹೇಳಿದರು.

ಜ–22 ರಂದು ಅಯೋಧ್ಯೆಯಲ್ಲಿ ಪ್ರಭು ಶ್ರೀರಾಮನ ಮೂರ್ತಿ ಪ್ರಾಣ ಪ್ರತಿಷ್ಠಾಪನೆಯಾಗಿದೆ. ಈ ಮೂಲಕ ಸುಮಾರು 500 ವರ್ಷಗಳ ಭಾರತೀಯರ ಕನಸನ್ನು ಮೋದಿಯವರು ಈಡೇರಿಸಿದ್ದಾರೆ. ದೇಶದಾದ್ಯಂತ ಬಿಜೆಪಿ ಪರ ಅಲೆಯಿದ್ದು, ಸತತ 3ನೇ ಬಾರಿ ಅವಧಿಗೆ ಮತ್ತೊಮ್ಮೆ ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಇತ್ತಿಚೆಗೆ ಪ್ರಧಾನಿ ನರೇಂದ್ರ ಮೋದಿಯವರು ತಮ್ಮ ಭಾಷಣದಲ್ಲಿ ದಿ. ಪಂಡಿತ ಜವಾಹರಲಾಲ ನೆಹರೂ ಅವರು ಮೀಸಲಾತಿ ನೀಡಲಿಕ್ಕೆ ವಿರೋಧ ವ್ಯಕ್ತಪಡಿಸಿದ್ದರು ಎಂದು ಹೇಳಿದ್ದಾರೆ. ಅಂದಿನ ಪ್ರಧಾನಿಯಾಗಿದ್ದ ಪಂಡಿತ. ನೆಹರೂ ಅವರು ಈ ಬಗ್ಗೆ ಪ್ರತಿ ರಾಜ್ಯಗಳಿಗೆ ಪತ್ರಗಳನ್ನು ಬರೆದಿದ್ದರು ಎಂದು ಮೋದಿಯವರು ಸ್ಫೋಟಕ ಮಾಹಿತಿಯನ್ನು ಬಿಚ್ಚಿಟ್ಟಿದ್ದಾರೆಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಹೇಳಿದರು.

ಬಿಜೆಪಿ ಜಿಲ್ಲಾ(ಗ್ರಾ) ಅಧ್ಯಕ್ಷ ಸುಭಾಷ ಪಾಟೀಲ ಮಾತನಾಡಿ ಬಿಜೆಪಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಬೇಕು. ಮತ್ತೊಮ್ಮೆ ನಮ್ಮ ಪಕ್ಷ ಕೇಂದ್ರದಲ್ಲಿ ಆಡಳಿತ ನಡೆಸಲು ಕಾರ್ಯಕರ್ತರು ದುಡಿಯಬೇಕು. ಜನಪ್ರೀಯ ಯೋಜನೆಗಳನ್ನು ಜನರ ಮುಂದೆ ಇಟ್ಟುಕೊಂಡು ಮತಯಾಚಿಸುವಂತೆ ಕೋರಿದರು.

ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ಅಭಿಯಾನದ ಜಿಲ್ಲಾ ಸಂಚಾಲಕ ವಿಜಯ ಗುಡ್ಡದಾರಿ, ಗೋಕಾಕ ನಗರ ಘಟಕದ ಅಧ್ಯಕ್ಷ ಭೀಮಶಿ ಭರಮಣ್ಣವರ, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಪಿ.ಎಲ್.ಬಬಲಿ, ಮಹಾಂತೇಶ ಕುಡಚಿ, ಬಿಜೆಪಿ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಎರಡೂ ಕ್ಷೇತ್ರಗಳ ಆಶ್ರಯದಲ್ಲಿ ಶಕ್ತಿ ವಂದನಾ ಅಭಿಯಾನದ ಪೂರ್ವಭಾವಿ ಸಭೆಯನ್ನು ಶಾಸಕ ಬಾಲಚಂದ್ರ ಜಾರಕಿಹೊಳಿ ಉದ್ಘಾಟಿಸಿದರು.

ಕೇಂದ್ರ ಸರ್ಕಾರದ ಯೋಜನೆಗಳ ಕುರಿತಂತೆ ಹೊರತಂದ ಕರಪತ್ರಗಳನ್ನು ಬಾಲಚಂದ್ರ ಜಾರಕಿಹೊಳಿ ಅವರು ಬಿಡುಗಡೆ ಮಾಡಿದರು.

# ಪತ್ನಿಯ ಆಸೆ ಪೂರೈಸಲು 'ಕಳ್ಳ'ನಾದ ಪತಿ

ಮಹಾರಾಷ್ಟ್ರ: ಪತ್ನಿಯ ಆಸೆ ಪೂರೈಸಲು ಕಷ್ಟಪಟ್ಟು ಕೆಲಸ ಮಾಡಿ ಹಣ ಸಂಪಾದನೆ ಮಾಡಿರುವ ಎಷ್ಟೋ ಸುದ್ದಿಗಳನ್ನು ಕೇಳಿದ್ದೇವೆ. ಆದರೆ ಇಲ್ಲೊಬ್ಬ ಮಾತ್ರ ಪತ್ನಿಯ ಆಸೆ ನೆರವೇರಿಸಲು ಸೂಪರ್ ಕಳ್ಳನಾಗಿ ಬದಲಾದ ಘಟನೆ ನಾಗ್ಪುರದಲ್ಲಿ ನಡೆದಿದೆ.

ಲಲಿತ್ ಬಂಧಿತ ಆರೋಪಿ. ಬೆಲೆ ಬಾಳುವ ವಸ್ತುಗಳ ಮೇಲೆ ಪತ್ನಿಯ ಮೋಹಕ್ಕೆ ಮನಸೋತು ಕಳ್ಳನಾಗಿದ್ದ ಯುವಕನನ್ನು ಬೈಕ್ ಕಳ್ಳತನದ ಆರೋಪದ ಮೇಲೆ ಪೊಲೀಸರು ಬಂಧಿಸಿದ್ದಾರೆ. ಅಪರಾಧ ವಿಭಾಗದಿಂದ ಬಂದ ಮಾಹಿತಿ ಪ್ರಕಾರ, ಆರೋಪಿ ಲಲಿತ್ ಈ ಹಿಂದೆ ಸೆಕೆಂಡ್ ಹ್ಯಾಂಡ್ ವಾಹನಗಳನ್ನು ಮಾರಾಟ ಮಾಡುತ್ತಿದ್ದ. ಲಲಿತ್ ಪ್ರೇಮ ವಿವಾಹವಾಗಿತ್ತು. ಮದುವೆಯ ನಂತರ ಕುಟುಂಬದ ಆರ್ಥಿಕ ಸಮಸ್ಯೆಗಳು ಹೆಚ್ಚಾದ ಕಾರಣ ಮನೆಯ ಖರ್ಚನ್ನು ನಿಭಾಯಿಸಲು ಮತ್ತು ಹೆಂಡತಿಯ ಹವ್ಯಾಸಗಳನ್ನು ಪೂರೈಸಲು ಲಲಿತ್ ದ್ವಿಚಕ್ರ ವಾಹನಗಳನ್ನು ಕದಿಯಲು ಪ್ರಾರಂಭಿಸಿದರು. ಲಲಿತ್ 12ನೇ ತರಗತಿವರೆಗೆ ಓದಿದ್ದು, ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡಿ ಗ್ರಾಮಾಂತರ ಪ್ರದೇಶದಲ್ಲಿ ಮಾರಾಟ ಮಾಡಲು ಆರಂಭಿಸಿದ್ದ ಎನ್ನಲಾಗಿದೆ.



ಪೊಲೀಸರ ಮಾಹಿತಿಯ ಪ್ರಕಾರ, ಪತ್ನಿಯ ದುಬಾರಿ ಹವ್ಯಾಸಗಳನ್ನು ಪೂರೈಸಲು ಪತಿ ಲಲಿತ್ ಕಳ್ಳತನದ ಹಾದಿ ಹಿಡಿದಿದ್ದನು. ಆರೋಪಿಗಳು ನಾಗ್ಪುರ, ಅಕೋಲಾ, ಅಮರಾವತಿ, ಗಡ್ಚಿರೋಲಿ, ಚಂದ್ರಾಪುರ, ಯವತ್ಮಾಲ್, ಭಂಡಾರಾ ಮತ್ತಿತರ ಜಿಲ್ಲೆಗಳಲ್ಲಿ ಕಳ್ಳತನ ಮಾಡುತ್ತಿದ್ದು, ವಿವಿಧ ಜಿಲ್ಲೆಗಳಲ್ಲಿ ಮಾರಾಟ ಮಾಡುತ್ತಿದ್ದರು. ಲಲಿತ್ ಸುಮಾರು ಎರಡು ವರ್ಷಗಳಿಂದ ವಾಹನ ಕಳ್ಳತನದಲ್ಲಿ ಸಕ್ರಿಯರಾಗಿದ್ದ. ವಾಹನ ಕಳವು ಮಾಡಿದ ಬಳಿಕ ಕೆಲ ಬದಲಾವಣೆ ಮಾಡಿ ಗ್ರಾಮಾಂತರ ಪ್ರದೇಶದಿಂದ ಕಳುಹಿಸುತ್ತಿದ್ದ.

ನಂತರ ದಾಖಲೆಗಳನ್ನು ಒದಗಿಸುವ ಭರವಸೆಯನ್ನು ನೋಡಿ ಸಿಕ್ಕ ಬೆಲೆಗೆ ಬೈಕ್ ಮಾರಾಟ ಮಾಡುತ್ತಿದ್ದರು. ಡ್ಯೂಪ್ಲಿಕೇಟ್ ಕೀಯಿಂದ ಬೀಗ ಮುರಿದು ವಾಹನ ಕಳ್ಳತನ ಮಾಡುತ್ತಿದ್ದ. 111 ಬೈಕ್‌ಗಳನ್ನು ಕದ್ದ ಯುವಕನನ್ನು ನಾಗ್ಪುರ ಕ್ರೈಂ ಬ್ರಾಂಚ್ ಬಂಧಿಸಿದೆ. ಆರೋಪಿಯ ಹೆಸರು ಲಲಿತ್ ಗಜೇಂದ್ರ ಭೋಂಗೆ ಎಂಬಾತನಿಂದ ಪೊಲೀಸರು ಸುಮಾರು 77 ಲಕ್ಷ ಮೌಲ್ಯದ ಬೈಕ್ ವಶಪಡಿಸಿಕೊಂಡಿದ್ದಾರೆ. ಆರೋಪಿಗಳನ್ನು ತಲುಪಲು ಪೊಲೀಸರು ಸುಮಾರು 250 ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಶೋಧಿಸಬೇಕಾಗಿತ್ತು ಎಂದು ನಾಗ್ಪುರ ಪೊಲೀಸ್ ಕಮಿಷನರ್ ಡಾ.ರವೀಂದ್ರ ಕುಮಾರ್ ಸಿಂಗಲ್ ಅವರು ಮಾಹಿತಿ ನೀಡಿದ್ದಾರೆ.

# ವಂಟಮೂರಿಯಲ್ಲಿ ಹಲ್ಲೆ ಪ್ರಕರಣ: 12 ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಕೆ



ಬೆಳಗಾವಿ: ಬೆಳಗಾವಿ ತಾಲೂಕಿನ ಹೊಸ ವಂಟಮೂರಿ ಗ್ರಾಮದಲ್ಲಿ ಮಹಿಳೆ ವಿವಸ್ತ್ರಗೊಳಿಸಿ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ಪೊಲೀಸರು ತನಿಖೆ ನಡೆಸಿ 12 ಆರೋಪಿಗಳ ವಿರುದ್ಧ ಬೆಳಗಾವಿ ನಾಲ್ಕನೇ ಜೆ.ಎಂ.ಎಫ್.ಸಿ. ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ.

ಪ್ರೀತಿಸಿದ ಯುವಕನ ಜೊತೆಗೆ ಯುವತಿ ಓಡಿ ಹೋದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ಯುವತಿ ಪೋಷಕರು ಯುವಕನ ತಾಯಿ ಮೇಲೆ ದಾಳಿ ಮಾಡಿ ವಿವಸ್ತ್ರಗೊಳಿಸಿ ಕಂಬಕ್ಕೆ ಕಟ್ಟಿ ಹಾಕಿ ಹಲ್ಲೆ ನಡೆಸಿದ್ದರು. ರಾಷ್ಟ್ರಮಟ್ಟದಲ್ಲಿ ಈ ಘಟನೆ ಗಮನ ಸೆಳೆದಿದ್ದು, ರಾಷ್ಟ್ರೀಯ ಮಹಿಳಾ ಆಯೋಗ, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ, ಬಿಜೆಪಿ ಸತ್ಯಶೋಧನಾ ಸಮಿತಿ ಬೆಳಗಾವಿಗೆ ಆಗಮಿಸಿ ಸಂತ್ರಸ್ತೆ ಭೇಟಿಯಾಗಿ ಸಾಂತ್ವನ ಹೇಳಿದ್ದರು.

ಕಾಕತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಂತರ ರಾಜ್ಯ ಸರ್ಕಾರ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಿತ್ತು. ಪ್ರಕರಣದ ಕುರಿತು ಸಂತ್ರಸ್ತೆ, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಗ್ರಾಮಸ್ಥರಿಂದ ಮಾಹಿತಿ ಕಲೆಹಾಕಿ ತನಿಖೆ ಪೂರ್ಣಗೊಳಿಸಿದ ಸಿಐಡಿ ಪೊಲೀಸರು ನ್ಯಾಯಾಲಯಕ್ಕೆ ಚಾರ್ಜ್ ಶೀಟ್ ಸಲ್ಲಿಸಿದ್ದಾರೆ.

# ಹೆಸ್ಕಾಂ ಕಚೇರಿಯಲ್ಲಿ ಜರುಗಿದ ಉಚಿತ ಆರೋಗ್ಯ ಮತ್ತು ಹೃದಯ ತಪಾಸಣೆ ಶಿಬಿರ

ಧಾರವಾಡ: ಧಾರವಾಡ ಶಹರ ಮತ್ತು ಗ್ರಾಮೀಣ ವಿಭಾಗದ ಹೆಸ್ಕಾಂ ನೌಕರರಿಗೆ ಯಂಗ್ ಇಂಡಿಂಯನ್ಸ್ ಮತ್ತು ರೋಟರಿ, ಧಾರವಾಡ ನಾರಾಯಣ ಹೃದಯಾಲಯದ ಸಹಯೋಗದಲ್ಲಿ ಉಚಿತ ಆರೋಗ್ಯ ಮತ್ತು ಹೃದಯ ತಪಾಸಣೆ ಶಿಬಿರವನ್ನು ನಿನ್ನೆ (ಫೆ.7) ಮಧ್ಯಾಹ್ನ ವಿದ್ಯಾಗಿರಿಯ ಹೆಸ್ಕಾಂ ಗ್ರಾಮೀಣ ಉಪ ಕಚೇರಿಯಲ್ಲಿ ಏರ್ಪಡಿಸಲಾಗಿತ್ತು.




ಶಿಬಿರದಲ್ಲಿ 150ಕ್ಕೂ ಹೆಚ್ಚು ಇಂಜಿನಿಯರ್, ಪವರ್ಮೆನ್, ಅಕೌಂಟ್ಸ್ ಸಿಬ್ಬಂದಿ, ದಿನಗೂಲಿ ನೌಕರರು ಭಾಗವಹಿಸಿದ್ದರು. ಉಚಿತ ಆರೋಗ್ಯ ಮತ್ತು ಹೃದಯ ತಪಾಸಣೆ ಶಿಬಿರದಲ್ಲಿ ರಕ್ತದೊತ್ತಡ, ಯಾದೃಚ್ಛಿಕ ರಕ್ತದ ಸಕ್ಕರೆ, ಇಸಿಜಿ, ಇಕೋ ಮತ್ತು ಕಾರ್ಡಿಯಾಲಜಿ ಸ'ವ'ಾ ಲ'ೋ ಚ' ನ' ನಡೆಸಲಾಯಿತು.

ಶಿಬಿರವು ಕಾರ್ಯಪಾಲಕ ಅಭಿಯಂತರರಾದ ಎಮ್.ಟಿ.ದೊಡ್ಡಮನಿ ಮತ್ತು ಎಂ. ಎಂ.ನದಾಫ್ ಮತ್ತು ಸಹಾಯಕ ಕಾರ್ಯ ನಿರ್ವಾಹಕ ಇಂಜನೀಯರ ಗುಲ್ಜಾರ್ ಎ.ಎಮ್. ಮಾರ್ಗದರ್ಶನದಲ್ಲಿ ಯಶಸ್ವಿಯಾಗಿ ಜರುಗಿತು.

ಶಿಬಿರದಲ್ಲಿ ಎಸ್ ಡಿ ಎಮ್ ನಾರಾಯಣ ಹಾರ್ಟ್ ಸೆಂಟರ್ ವೈದ್ಯಾಧಿಕಾರಿ ಡಾ. ಲಲಿತಾ ಕರ್ಬಿ, ಮಾರುಕಟ್ಟೆ ವಿಭಾಗದ ಪ್ರಭಾರಿ ಮೇಲ್ವಿಚಾರಕ ದುಂಡೇಶ ತಡಕೋಡ ಹಾಗೂ ಇತರ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ಭಾಗವಹಿಸಿದ್ದರು.

# ಶಾಲಾ ಶಿಕ್ಷಕರಿಗೆ ಯೋಗ ತರಬೇತಿ ಕಾರ್ಯಕ್ರಮ



ಶಿವಮೊಗ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಅಯುಷ್ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಶಿವಮೊಗ್ಗ ಇವರ ಸಹಯೋಗದಲ್ಲಿ ರಾಷ್ಟ್ರೀಯ ಆಯುಷ್ ಅಭಿಯಾನದಡಿ ಫೆ.6 ಮತ್ತು 7 ರಂದು 2 ದಿನಗಳ ಕಾಲ ಶಾಲಾ ಶಿಕ್ಷಕರಿಗೆ ಯೋಗ ತರಬೇತಿ ಕಾರ್ಯಕ್ರಮವನ್ನು ಬಸವನಗುಡಿಯ ಸರ್ಕಾರಿ ನೌಕರರ ವಿಕಾಸ ಕೇಂದ್ರ ಇಲ್ಲಿ ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಆಯುಷ್ ಅಧಿಕಾರಿ(ಪ್ರ) ಡಾ.ಸಿ.ಎ.ಹಿರೇಮಠ ಇವರು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬಿ.ಹೆಚ್.ನಿರಂಜನಮೂರ್ತಿ, ಜಿ.ಹೆಚ್.ಪ್ರಭು, ಕಾಳಾನಾಯ್ಕ್ ಭಾಗವಹಿಸಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಡಾ.ಅನಿಲ್ಕುಮಾರ್ ಎಸ್.ಹೆಚ್, ಡಾ.ಮಲ್ಲಿಕಾರ್ಜುನ ಡಂಬಳ, ಡಾ.ಪತಂಜಲಿ ಕೆ.ವಿ, ಡಾ.ವೀಣಾ ಭಟ್, ಡಾ.ಗೀತಾ ಕೆ.ಎಸ್ ಮತ್ತು ಡಾ.ಶಿವಕುಮಾರ್ ಟಿ ಪಾಲ್ಗೊಂಡಿದ್ದರು.

ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್.ಷಡಾಕ್ಷರಿ ವಹಿಸಿ ಮಾತನಾಡಿದರು. ಕಾರ್ಯಕ್ರಮ ಸಂಯೋಜನೆಯನ್ನು ಡಾ.ಸುರೇಂದ್ರ ಸಿ ಇವರು ನೆರವೇರಿಸಿದರು.

# ಮೊಬೈಲ್ ಕದ್ದು ಪರಾರಿಯಾದ ಖದೀಮರು: ಬೆನ್ನಟ್ಟಿ ಬಂಧಿಸಿದ ಪೊಲೀಸರು

ಬೆಂಗಳೂರು: ಆಟೋದಲ್ಲಿ ಮಲಗಿದ್ದ ಚಾಲಕನನ್ನು ಹೆದರಿಸಿ ಹಲ್ಲೆ ಮಾಡಿ ಮೊಬೈಲ್ ಹಾಗೂ ಹಣ ಸುಲಿಗೆ ಮಾಡಿದ್ದ ಖತರ್ನಾಕ್ ಚೋರರನ್ನು ಇಂದಿರಾನಗರ ಠಾಣೆ ಪೊಲೀಸರು ಬೆನ್ನಟ್ಟಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.



ನಗರದ ವಿನೋದ (22), ಸ್ಟೀಫನ್ ರಾಜ್ (24) ಬಂಧಿತ ಚೋರರು. ಕಳೆದ ಜ.31ರಂದು ಮುಂಜಾನೆ 4 ಗಂಟೆ ಸಮಯದಲ್ಲಿ ಸಿದ್ದೇಶ್ ಎಂಬ ಆಟೋ ಚಾಲಕ ಇಂದಿರಾನಗರ ಪೊಲೀಸ್ ಠಾಣೆ ವ್ಯಾಪ್ತಿಯ 100 ಅಡಿ ರಸ್ತೆ ಸಮೀಪ ರಸ್ತೆ ಬದಿ ಆಟೋ ನಿಲ್ಲಿಸಿ ಮಲಗಿ ವಿಶ್ರಾಂತಿ ಪಡೆಯುತ್ತಿದ್ದಾಗ ಆರೋಪಿಗಳು ಚಾಲಕನನ್ನು ಬೆದರಿಸಿ ಹಲ್ಲೆ ಮಾಡಿ ಜೇಬಿನಲ್ಲಿದ್ದ ಮೊಬೈಲ್ ಹಾಗೂ 2300ರೂ. ನಗದನ್ನು ಕಿತ್ತುಕೊಂಡು ಪರಾರಿಯಾಗಿದ್ದರು.

ಈ ವೇಳೆ ಚಾಲಕ ನಗರದ ತುರ್ತು ಸೇವೆ 112ಕ್ಕೆ ಕರೆ ಮಾಡಿ ಘಟನೆ ಬಗ್ಗೆ ತಿಳಿಸಿದ್ದಾರೆ.

ಕೂಡಲೇ ಕಾರ್ಯಪ್ರವೃತ್ತರಾದ ಹೊಯ್ಸಳ 30ರ ವಾಹನದಲ್ಲಿದ್ದ ಸಹಾಯಕ ಪೊಲೀಸ್ ಇನ್ಸ್‌ಕ್ಟರ್ ವಿಲಿಯಮ್ ಜಾರ್ಜ್ ಮತ್ತು ಚಾಲಕ ಬೀರಪ್ಪ ಪೂಜಾರಿ ಅವರು ದ್ವಿಚಕ್ರ ವಾಹನದಲ್ಲಿ ಪರಾರಿಯಾಗುತ್ತಿದ್ದ ಆರೋಪಿಗಳ ಬೆನ್ನಟ್ಟಿ ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

# ಪ್ರಾದೇಶಿಕ ಕಲೆ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಪ್ರತಿಭೆಗಳ ಮೂಲಕ ಪರಿಚಯಿಸುವ ಪ್ರತಿಭಾ ಕಾರಂಜಿ, ಕಲೋತ್ಸವದ ಗುರಿ : ಶಾಸಕ ಎನ್.ಎಚ್.ಕೋನರಡ್ಡಿ

ಧಾರವಾಡ: ಪ್ರಾದೇಶಿಕವಾಗಿ ಭಾಷೆ, ಸಂಸ್ಕೃತಿ, ಕಲೆ, ವೇಷಭೂಷಣಗಳಲ್ಲಿ ವ್ಯತ್ಯಾಸವಿರುತ್ತದೆ. ಆದರೆ ಮಕ್ಕಳು ಕಲೆ, ಪ್ರತಿಭೆಗಳ ಮೂಲಕ ನಾಡಿನ ಏಕತೆಯನ್ನು ಸಾರುತ್ತವೆ. ಈ ಕಾರ್ಯಕ್ಕೆ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಪೂರಕವಾಗಿದೆ ಎಂದು ಶಾಸಕ ಎನ್.ಎಚ್.ಕೋನರಡ್ಡಿ ಅವರು ಹೇಳಿದರು.

ಅವರು ಬೆಳಿಗ್ಗೆ ವಿದ್ಯಾಗಿರಿ ಜೆಎಸ್‌ಎಸ್ ಆವರಣದ ಸನ್ನಿಧಿ ಕಲಾಕ್ಷೇತ್ರದಲ್ಲಿ ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಧಾರವಾಡ ಉಪನಿರ್ದೇಶಕ ಕಚೇರಿ ಮತ್ತು ಜನತಾ ಶಿಕ್ಷಣ ಸಮಿತಿ ಸಂಯುಕ್ತವಾಗಿ ಆಯೋಜಿಸಿದ್ದ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ 2023–24ನ್ನು ಸಂಗೀತ ಪರಿಕರಗಳನ್ನು ನುಡಿಸಿ, ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ, ಮಾತನಾಡಿದರು.



ವಿದ್ಯಾರ್ಥಿಗಳಲ್ಲಿ ಗುರಿ ಇರಬೇಕು. ಗುರಿಗೆ ತಕ್ಕಂತೆ ತಮ್ಮ ಹವ್ಯಾಸಗಳನ್ನು ರೂಪಿಸಿಕೊಳ್ಳಬೇಕು. ಶಾಲೆಗಳಲ್ಲಿ ಆಯೋಜಿಸುವ ವಿವಿಧ ಕಾರ್ಯಕ್ರಮಗಳು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಅವಕಾಶ ನೀಡುತ್ತವೆ ಎಂದು ಅವರು ಹೇಳಿದರು.

ರಾಜ್ಯಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಜಿಲ್ಲೆಯ ಸಂಸ್ಕೃತಿ, ಸಾಹಿತ್ಯ, ಕಲೆಗಳನ್ನು ಪರಿಚಯಿಸಲು ಉತ್ತಮ ಅವಕಾಶ. ಕಾರ್ಯಕ್ರಮವನ್ನು ಅದ್ದೂರಿಯಾಗಿ, ಅರ್ಥಪೂರ್ಣವಾಗಿ ಸಂಘಟಿಸಿದ್ದು, ಇದೊಂದು ಹೆಮ್ಮೆ ಎಂದು ಶಾಸಕ ಎನ್.ಎಚ್.ಕೋನರಡ್ಡಿ ತಿಳಿಸಿದರು.

ಅಧ್ಯಕ್ಷತೆವಹಿಸಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಮಕ್ಕಳಲ್ಲಿನ ಪ್ರತಿಭೆಯನ್ನು ಪ್ರೋತ್ಸಾಹಿಸುವ ಕಾರ್ಯ ಪ್ರತಿಭಾ ಕಾರಂಜಿ ಮೂಲಕ ಸರಕಾರ ಮಾಡುತ್ತಿದೆ. ವಿದ್ಯಾರ್ಥಿ ಜೀವನದಲ್ಲಿ ಸೋಲು, ಗೆಲುವು ಸಾಮಾನ್ಯ. ಇದರಿಂದ ಅವರಲ್ಲಿನ ಪ್ರತಿಭೆ ಬೆಳೆಯುತ್ತದೆ. ಸ್ಪರ್ಧೆಗಳು ಜೀವನದ ಪಾಠಗಳನ್ನು ಕಲಿಸುವ ಮೆಟ್ಟಿಲುಗಳು. ಶಿಕ್ಷಣ ಇಲಾಖೆ ಅನೇಕ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಪರಿಪೂರ್ಣ ವ್ಯಕ್ತಿತ್ವ ರೂಪಿಸಲು ಪ್ರಯತ್ನಿಸುತ್ತದೆ ಎಂದು ಅವರು ಹೇಳಿದರು.

ವಿದ್ಯಾರ್ಥಿಗಳು ತಮ್ಮಲ್ಲಿ ಗುಪ್ತವಾಗಿರುವ ಕಲೆ, ಪ್ರತಿಭೆಗಳನ್ನು ಮುಕ್ತವಾಗಿ ಪ್ರಸ್ತುತ ಪಡಿಸಬೇಕು. ಯಾರಲ್ಲೂ ಸಾಧನೆಗೆ ಅಡ್ಡಿಯಾಗುವ ಹಿಂಜರಿಕೆ, ಕೀಳರಿಮೆ ಇರಬಾರದು. ತಮ್ಮಲ್ಲಿರುವ ಧೈರ್ಯ, ಆತ್ಮವಿಶ್ವಾಸಗಳನ್ನು ನಂಬಿ ಮುನ್ನಡೆಯಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ವಿದ್ಯಾರ್ಥಿಗಳಿಗೆ ಯಶಸ್ಸು ಆಯ್ಕೆ ಆಗಬೇಕು, ಅವಕಾಶ ಆಗಬಾರದು ಎಂದು ಜಿಲ್ಲಾಧಿಕಾರಿಗಳು ಕಿವಿ ಮಾತು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಚೇರಿ ನಿರ್ದೇಶಕಿ ಮಮತಾ ನಾಯಕ ಅವರು ಕಾರ್ಯಕ್ರಮ ಉದ್ದೇಶಿಸಿ, ಮಾತನಾಡಿದರು.

ಸಾನಿಧ್ಯ ವಹಿಸಿ, ಮುರಘಾಮಠದ ಮ.ನಿ.ಪ್ರ. ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ವೇದಿಕೆಯಲ್ಲಿ ಜೆಎಸ್‌ಎಸ್ ಸಂಸ್ಥೆಯ ಕಾರ್ಯದರ್ಶಿ ಪ್ರೊ.ಅಜಿತ ಪ್ರಸಾದ, ಜಂಟಿ ನಿರ್ದೇಶಕ ಈಶ್ವರ ನಾಯಕ್, ಡೈಯಟ್ ಪ್ರಾಚಾರ್ಯೆ ಜಯಶ್ರೀ ಕಾರೇಕರ, ಜೆಎಸ್‌ಎಸ್ ಐಟಿಐ ಪ್ರಾಚಾರ್ಯ ಮಹಾವೀರ ಉಪಾಧ್ಯಾಯ, ಡಿವೈಪಿಸಿಗಳಾದ ಜಿ.ಎನ್.ಮಠಪತಿ, ಎಸ್.ಎಂ.ಹುಡೆದಮನಿ, ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ಎಸ್.ಎಫ್.ಸಿದ್ದನಗೌಡರ, ಶಿಕ್ಷಕ ಸಂಘಟನೆಗಳ ಪದಾಧಿಕಾರಿಗಳಾದ ವಿ.ಎಫ್.ಚುಳಕಿ, ಎಸ್.ವಿ.ಮಂಜಣ್ಣವರ, ವಿ.ಎಸ್.ಹದ್ದಾರ, ಎಂ.ಕೆ.ಬಿರಾದಾರ ಸೇರಿದಂತೆ ಇತರರು ಇದ್ದರು.

ಪೋರ್ಥ ವೇವ್ ಸಂಸ್ಥೆಯ ಸಹಕಾರದಲ್ಲಿ ಧಾರವಾಡ ಶಹರದ ವಿಶೇಷಚೇತನ ಮಕ್ಕಳಿಂದ ನೃತ್ಯದೊಂದಿಗೆ ಜರುಗಿದ ಪ್ರಾರ್ಥನಾ ಕಾರ್ಯಕ್ರಮವು ಸಭಿಕರ ಗಮನ ಸೆಳೆಯಿತು. ಸರಕಾರಿ ಪ್ರೌಢಶಾಲೆ ಉಪನಿರ್ದೇಶಕ ಎಸ್. ಎಸ್.ಕೆಳದಿಮಠ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಕರಡಿಗುಡ್ಡ ಸರಕಾರಿ ಪ್ರೌಢಶಾಲಾ ಮುಖ್ಯಾಧ್ಯಾಪಕಿ ಪೂರ್ಣಿಮಾ ಮುಕುಂದಿ ಅವರು ಕಾರ್ಯಕ್ರಮ ನಿರೂಪಿಸಿದರು. ಎಸ್.ಎಂ.ಹುಡೆದಮನಿ ವಂದಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಜಿಲ್ಲೆಗಳಗಳ ಸ್ಪರ್ಧಾಳುಗಳು, ಶಿಕ್ಷಕರು ಭಾಗವಹಿಸಿದ್ದರು.

# ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಆಯ್ಕೆ ಪಟ್ಟಿ

## ಅಂತಿಮ-ಆಕ್ಷೇಪಣೆ ಸಲ್ಲಿಕೆಗೆ ಕಾಲಾವಕಾಶ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಹುದ್ದೆಗಳ ನೇಮಕಾತಿ ಪ್ರಕ್ರಿಯನ್ನು ಅಂತಿಮಗೊಳಿಸಲಾಗಿದ್ದು, ಆಯ್ಕೆಪಟ್ಟಿಯನ್ನು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ ಎಂದು ಆಯ್ಕೆ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.



ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇ–ರಿಯಲ್ಲಿ ಬುಧವಾರ(ಫೆ.7) ಆಯ್ಕೆ ಸಮಿತಿಯ ಸಭೆಯಲ್ಲಿ ಆಯ್ಕೆ ಪ್ರಕ್ರಿಯನ್ನು ಪೂರ್ಣಗೊಳಿಸಲಾಗಿದೆ.

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಹುದ್ದೆಗಳಿಗೆ ಸಲ್ಲಿಕೆಯಾಗಿರುವ ಅರ್ಜಿಗಳು ಮತ್ತು ದಾಖಲಾತಿಗಳನ್ನು ಕೂಲಂಕುಶವಾಗಿ ಪರಿಶೀಲಿಸಿದ ಬಳಿಕ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಲಾಯಿತು.

283 ಅಂಗನವಾಡಿ ಕಾರ್ಯಕರ್ತೆ ಹುದ್ದೆಗಳಿಗೆ 4,743 ಅರ್ಜಿಗಳು ಹಾಗೂ 808 ಅಂಗನವಾಡಿ ಸಹಾಯಕಿಂ–ಯರ ಹುದ್ದೆಗಳಿಗೆ 8,135 ಅರ್ಜಿಗಳು ಸಲ್ಲಿಕೆಯಾಗಿದ್ದವು. ಜಿಲ್ಲೆಯ 14 ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ತಾಲ್ಲೂಕು ಮಟ್ಟದ ಪರಿಶೀಲನಾ ಸಮೀತಿಯಲ್ಲಿ ಅರ್ಜಿಗಳನ್ನು ಸುದೀರ್ಘ ಹಾಗೂ ಪಾರದರ್ಶಕವಾಗಿ ಪರಿಶೀಲಿಸಿದ ಬಳಿಕ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ಮಂಡಿಸಲಾಗಿತ್ತು.

ಆಯ್ಕೆ ಪಟ್ಟಿ ಪ್ರಕಟ:

ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಆಯ್ಕೆಯನ್ನು ಅರ್ಹತೆ ಮತ್ತು ಮೆರಿಟ್ ಆದ–ಾರದಲ್ಲಿ ಪಾರದರ್ಶಕವಾಗಿ ಇಲಾಖೆಯ ಮಾರ್ಗಸೂಚಿ ಅನುಸಾರ ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿಯ ಜಿಲ್ಲಾ ಪಂಚಾಯತ, ಆಯಾ ತಾಲೂಕಿನ ತಾಲೂಕ ಕಚೇರಿ, ತಾಲೂಕು ಪಂಚಾಯತ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹಾಗೂ ಸಂಬಂಧಿಸಿದ ಗ್ರಾಮ ಪಂಚಾಯತ, ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಪ್ರಚುರ ಪಡಿಸಲಾಗಿದೆ.

ಆಯ್ಕೆಯ ಸಂಬಂಧಿಸಿದಂತೆ ಅಭ್ಯರ್ಥಿಗಳು ಆಕ್ಷೇಪಣೆ ಇದ್ದಲ್ಲಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಫೆ.21, ರಂದು ಸಂಜೆ 5.30 ಗಂಟೆಯೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಆಯ್ಕೆ ಸಮಿತಿಯ ಉಪಾಧ್ಯಕ್ಷರಾದ ರಾಹುಲ್ ಶಿಂಧೆ, ಆಯ್ಕೆ ಸಮಿತಿ ಸದಸ್ಯರಾದ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಮತ್ತು ಆಯ್ಕೆ ಸಮಿತಿ ಕಾರ್ಯದರ್ಶಿಗಳಾಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಬಸವರಾಜ್, ಜಿಲ್ಲಾ ನಿರೂಪಣಾಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾ–ರಿಗಳು ಸಭೆಯಲ್ಲಿ ಹಾಜರಿದ್ದರು.

# ಕಾರ್ಮಿಕರಿಗೆ ಉದ್ಯೋಗ ನೀಡಿ: ಜಹಾಂಗೀರದಾರ



ಬೆಳಗಾವಿ: ತಾಲ್ಲೂಕಿನಲ್ಲಿ ಬರಗಾಲ ಇರುವುದರಿಂದ ದುಡಿಯುವ ಕೈಗಳಿಗೆ ನಿರಂತರ ಉದ್ಯೋಗ ನೀಡಬೇಕೆಂದು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಭಾಗ್ಯಶ್ರೀ ಜಹಾಂಗೀರದಾರ ಸೂಚಿಸಿದರು.

ಸ್ಥಳೀಯ ತಾಪಂ ಸಭಾಭವನದಲ್ಲಿ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರಿಗೆ ನರೇಗಾ ಯೋಜನೆಯು ಆಶ್ರಯ ಆಗಿದೆ. ಆದ್ದರಿಂದ ಕೂಲಿ ಕಾರ್ಮಿಕರು ಉದ್ಯೋಗ ಕೇಳಿದ ತಕ್ಷಣ ನೀಡಬೇಕು.

ಕೂಲಿ ಕಾರ್ಮಿಕರಿಗೆ ಅನುಗುಣವಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಾಮಗಾರಿ ಸ್ಥಳಗಳನ್ನು ಗುತಿಸಿ ಕೂಲಿ ಕಾರ್ಮಿಕರಿಗೆ ಉದ್ಯೋಗ ನೀಡಬೇಕು.

ವಿನಾಕಾರಣ ಕೂಲಿ ಕಾರ್ಮಿಕರಿಗೆ ಉದ್ಯೋಗ ನೀಡದೇ ಇರುವುದು ಕಂಡು ಬಂದರೆ ಅಂತವರ ವಿರುದ್ಧ ಕ್ರಮ ಕೈಗೊಳಲಾಗುವುದು ಎಂದರು.

ಕೂಸಿನ ಮನೆ ಪ್ರಾರಂಭ ಮಾಡದೇ ಇರುವ ಗ್ರಾಮ ಪಂಚಾಯತಿ ಯವರು ಬೇಗನೆ ಪ್ರಾರಂಭ ಮಾಡ ಬೇಕು.

ಮಕ್ಕಳಿಗೆ ಬೇಕಾಗುವ ಆಟಿಕೆ ಸಾಮಾಗ್ರಿಗಳು ಕಡ್ಡಾಯವಾಗಿ ಕೂಸಿನಮನೆಯಲ್ಲಿ ಇರಬೇಕು ಎಂದು ಹೇಳಿದರು.

ಬರಗಾಲ ಎದುರಾಗುವ ಗ್ರಾಮ ಪಂಚಾಯತಿವರು ಮುಂಜಾಗ್ರತೆ ವಹಿಸಿ ಮೇಲಾಧಿಕಾರಿಗಳಿಗೆ ವರದಿ ಮಾಡಬೇಕು. ಯಾವುದೇ ಗ್ರಾಮಗಳಲ್ಲಿ ಕೂಡಿಯುವ ನೀರಿನ ತೊಂದರೆಯಾಗಂತೆ ನೋಡಿಕೊಳಬೇಕು.

ಕೆಲವು ಗ್ರಾಮ ಪಂಚಾಯತಿಗಳ ಕರ ವಸುಲಾತಿ ಕಡಿಮೆ ಇದ್ದು, ಅಂತಹ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕರ ವಸುಲಾತಿ ಹೆಚ್ಚಳವಾಗುಂತೆ ಕ್ರಮ ವಹಿಸಬೇಕೆಂದು ತಿಳಿಸಿದರು.

ಸಹಾಯಕ ನಿರ್ದೇಶಕರಾದ (ಗ್ರಾ.ಉ) ಬಿ.ಡಿ ಕಡೇಮನಿ, ಸಹಾಯಕ ನಿರ್ದೇಶಕರು ( ಪ.ರಾ) ಗಣೇಶ ಕೆ.ಎಸ್., ಸಿಬ್ಬಂದಿಗಳಾದ ಶ್ರೀಧರ ಸರದಾರ, ನಾಗರಾಜ ಯರಗುದ್ದಿ, ಶೀತಲ ಪಾಟೀಲ, ರಮೇಶ ಮಾದರ ಸೇರಿದಂತೆ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಇದ್ದ.

# ಅಂಗನವಾಡಿ ಮಕ್ಕಳಿಗೆ ಡೆಸ್ಕ್ ವ್ಯವಸ್ಥೆ ಕ್ರಮ

## ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಸಿಇಓ ರಾಹುಲ್ ಶಿಂಧೆ ಸೂಚನೆ

ಬೆಳಗಾವಿ: ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳು ಕುಳಿತುಕೊಳ್ಳಲು ಡೆಸ್ಕ್ ವ್ಯವಸ್ಥೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳಬೇಕು ಎಂದು ಜಿಪಂ ಸಿಇಓ ರಾಹುಲ ಶಿಂಧೆ ಸೂಚನೆ ನೀಡಿದರು.



ಇಲ್ಲಿನ ಶಿವಾಜಿ ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಕಚೇರಿಯ ಸಭಾಂಗಣದಲ್ಲಿ ಬುಧವಾರ (ಫೆ.07) ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಅಂಗನವಾಡಿ ಕಟ್ಟಡಗಳ ದುರಸ್ಥಿ, ಪುನರ್ ನಿರ್ಮಾಣ ಹಾಗೂ ಸುಸ್ಥಿತಿಯಲ್ಲಿರುವ ಕೇಂದ್ರಗಳ ಬಗ್ಗೆ ಮಾಹಿತಿ ಪಡೆದ ಅವರು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳನ್ನು ಸರಕಾರಿ ಶಾಲೆಗಳಿಗೆ ಸ್ಥಳಾಂತರಿಸಬೇಕು ಎಂದು ಸೂಚಿಸಿದರು.

ಅಂಗನವಾಡಿ ಮಕ್ಕಳು ಶಾಲೆಗಳಲ್ಲಿ ಇರುವುದರಿಂದ ಶಾಲೆಯ ವಾತಾವರಣದಲ್ಲಿ ಬೇಗ ಬೆರೆಯುತ್ತವೆ. ಅಂಗನವಾಡಿ ಕಟ್ಟಡಗಳು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರಬಾರದು ಕಡ್ಡಾಯವಾಗಿ ಸೌಕರ್ಯಗಳನ್ನು ಒದಗಿಸಬೇಕು. ಉತ್ತಮ ಗಾಳಿ ಹಾಗೂ ಬೆಳಕು ಶುದ್ಧ ನೀರು ಒದಗಿಸುವಂತಿ ತಿಳಿಸಿದರು.

ಪ್ರತಿ 3 ತಿಂಗಳಿಗೊಮ್ಮೆ ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯದ ಬಗ್ಗೆ ತಪಾಸಣೆ ನಡೆಸಬೇಕು. ತೂಕ ಕಡಿಮೆ ಸೇರಿದಂತೆ ಯಾವುದೇ ಆರೋಗ್ಯದ ಸಮಸ್ಯೆ ಕಂಡು ಬಂದರೆ ಚಿಕಿತ್ಸೆ ನೀಡಬೇಕು ಹಾಗೂ ಅಪೌಷ್ಠಿಕತೆ ಇರುವ ಮಕ್ಕಳನ್ನು ಎನ್‌ಆರ್‌ಸಿ/ ಎಂಎನ್‌ಆರ್‌ಸಿಗೆ ಕಳುಹಿಸಿ ಚಿಕಿತ್ಸೆ ಕೊಡಿಸಲು ನಿರ್ದೇಶನ ನೀಡಿದರು.

ಪ್ರತಿ ತಿಂಗಳು 3ನೇ ಶನಿವಾರ ಜಿಲ್ಲೆಯ ಎಲ್ಲ ಅಂಗನವಾಡಿ ಕೇಂದ್ರಗಳಲ್ಲಿ ಬಾಲವಿಕಾಸ ಸಲಹಾ ಸಮಿತಿ ಸಭೆ ಏರ್ಪಡಿಸಬೇಕು. ಈ ಸಭೆಯಲ್ಲಿ ಗರ್ಭಿಣಿ/ಬಾಣಂತಿಯ–ರಿಗೆ ಸಭೆಯಲ್ಲಿ ಹಾಜರಿರಲು ತಿಳಿಸಿ ಇಲಾಖೆಯ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಬೇಕು. ಅಂಗನವಾಡಿ ಕೇಂದ್ರಗಳ ಮಕ್ಕಳನ್ನು ಶಾಲಾ ಪೂರ್ವ ಶಿಕ್ಷಣ ಮುಗಿದ ನಂತರ ಸರಕಾರಿ ಪ್ರಾಥಮಿಕ ಶಾಲೆಗಳಿಗೆ ಹೋಗುವಂತೆ ಎಲ್ಲ ಕಾರ್ಯಕರ್ತೆಯರು ಹಾಗೂ ಮುಖ್ಯೋಪಾಧ್ಯಯರು ಪ್ರೇರೇಪಿಸುವ ನಿಟ್ಟಿನಲ್ಲಿ ಜಾಗೃತಿ ಮೂಡಿಸುವಂತೆ ತಿಳಿಸಿದರು.

ಅದೇ ರೀತಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯ ಹಾಜರಾತಿ ಪರಿಶೀಲಿಸಿದ ಜಿಪಂ ಸಿಇಓ ರಾಹುಲ್ ಶಿಂಧೆ ಅವರು ಸಿಬ್ಬಂದಿಯ ಕಾರ್ಯವೈಖರಿ ಕುರಿತು ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಬಸವರಾಜ್ ಎ.ಎಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾ–ರಿಗಳಾದ ರೇವತಿ ಹೊಸಮಠ, ಜಿಲ್ಲೆಯ ಎಲ್ಲ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

# ಬಹುಭಾಷಾ ಹಾಸ್ಯಗೋಷ್ಠಿ



ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 10 ಶನಿವಾರ ಸಾಯಂಕಾಲ 4–30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನ ಸಭಾಭವನದಲ್ಲಿ "ಬಹು ಭಾಷಾ ಹಾಸ್ಯಗೋಷ್ಠಿ"ಯನ್ನು ಹಮ್ಮಿಕೊಂಡಿದ್ದಾರೆ.

ಪ್ರೊ. ಎಂ. ಎಸ್. ಇಂಚಲ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದು ಗುಂಡೇನಟ್ಟಿ ಮಧುಕರ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಕೆ. ಎಸ್.ಆರ್ಟಿ.ಸಿ ಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಪಿ.ವಿ. ಪಾಟೀಲ ಅವರು ಪ್ರಾಯೋಜಕತ್ವವನ್ನು ವಹಿಸಿಕೊಂಡಿದ್ದಾರೆ. ಕನ್ನಡ, ಹಿಂದಿ, ಇಂಗ್ಲೀಷ, ಮರಾಠಿ, ಉರ್ದು ಭಾಷೆಗಳಲ್ಲಿ ನಗೆಮಾತುಗಾರರಾದ ಎಸ್.ವಿ. ದೀಕ್ಷೀತ, ಚಿದಂಬರ ಮುನವಳ್ಳಿ, ಜಿ. ಎಸ್. ಸೋನಾರ, ಡಾ, ಎನ್. ಎಂ. ಖತೀಬ, ಶ್ರೀಮತಿ ವೃಂದಾ ಮುತಾಲಿಕ ದೇಸಾಯಿ ಮಾತನಾಡಲಿದ್ದಾರೆ. ಕೆ.ತಾನಾಜಿ ನಿರೂಪಿಸಲಿದ್ದಾರೆ.

ಪ್ರವೇಶ ಉಚಿತವಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಹಾಸ್ಯಪ್ರಿಯರು ಬಂದು ನಕ್ಕು ಹಗುರಾಗಬೇಕೆಂದು ಸಾಹಿತ್ಯ ಭವನದ ಗೌರವ ಕಾರ್ಯದರ್ಶಿ ರಾಮಚಂದ್ರ ಕಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಪಿಎಚ್‌ಡಿ ಪದವಿ ಪ್ರದಾನ




ಬೆಳಗಾವಿ: ಬಸವರಾಜ ಎ. ಕುಮಸಿ ಅವರು ದೈಹಿಕ ಶಿಕ್ಷಣ ವಿಷಯದಲ್ಲಿ "ಕೋ–ರಿಲೇಶನ್ ಬಿಟ್ವೀನ್ ಸೆಲೆಕ್ಟೆಡ್ ಸೈಕಾಲಾಜಿಕಲ್ ವೇರಿಯೇಬಲ್ಸ್ ಆ್ಯಂಡ್ ಅಕಾಡೆಮಿಕ್ ಅಚೀವ್‌ಮೆಂಟ್ ಆಫ್ ಸ್ಪೋರ್ಟ್ಸ್ ಹಾಸ್ಟೆಲ್ ಪ್ಲೇಯರ್ಸ" ಎಂಬ ವಿಷಯದ ಕುರಿತು ಮಂಡಿಸಿದ ಸಂಶೋಧನಾ ಮಹಾ ಪ್ರಬಂಧಕ್ಕೆ ಕುವೆಂಪು ವಿಶ್ವವಿದ್ಯಾಲಯ ಪಿಹೆಚ್ಡಿ ಪದವಿ ಪ್ರದಾನ ಮಾಡಿದೆ. ಪ್ರಸ್ತುತ ಇವರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ವಿಭಾಗದಲ್ಲಿ ಸಹಾಯಕ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಇವರಿಗೆ ಕುವೆಂಪು ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕರಾದ ಡಾ. ರವೀಂದ್ರ ಗೌಡ ಎಸ್. ಎಂ. ಅವರು ಮಾರ್ಗದರ್ಶಕರಾಗಿದ್ದರು.

# ವಿದೇಶಾಂಗ ಸಚಿವ ಎಸ್ ಜೈಶಂಕರ ಅವರನ್ನು ಭೇಟಿಯಾದ ಡಾ.ಪ್ರಭಾಕರ ಕೋರೆ

ಬೆಳಗಾವಿ: ನವದೆಹಲಿಯಲ್ಲಿ ಕೇಂದ್ರ ವಿದೇಶಾಂಗ ಸಚಿವಎಸ್. ಜೈಶಂಕರ ಅವರನ್ನು ಕೆಎಲ್‌ಇ ಸಂಸ್ಥೆಯ ಕಾರ್ಯಾ ಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಭೇಟಿಯಾದರು.




ಈ ಸಂದರ್ಭದಲ್ಲಿ ವಿದೇಶಿ ವಿಶ್ವ ವಿದ್ಯಾಲಯಗಳ ಶೈಕ್ಷಣಿಕ ಒಡಂಬಡಿಕೆ, ಹೊಸ ಕಲಿಕಾ ವಿಧಾನಗಳು ಹಾಗೂ ಕೋರ್ಸುಗಳು ಕುರಿತು ಚರ್ಚೆಯನ್ನು ಮಾಡಿ ಉಭಯ ಕುಶಲೋಪಹ–ರಿಯನ್ನು ಹಂಚಿಕೊಂಡರೆಂದು ಸುದ್ದಿಗಾರರು ತಿಳಿಸಿದ್ದಾರೆ.

# ನಾಲ್ವರು ದಲಿತ ಸಚಿವರ ಸಭೆ

## ತಿಂಡಿ ತಿನ್ನಲು ಸೇರಿದ್ದು ಎಂದ ಸಚಿವ ಸತೀಶ್ ಜಾರಕಿಹೊಳಿ

ಬೆಂಗಳೂರು: ರಾಜ್ಯ ಸರ್ಕಾರದ ದಲಿತ ಮಂತ್ರಿಗಳು ಯಾವುದೋ ಒಂದು ವಿಷಯವನ್ನು ಚರ್ಚಿಸುತ್ತಿರುವಂತಿದೆ. ಅವರೆಲ್ಲ ಒಂದುಗೂಡಿ ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ಗುಪ್ತ್ ಸಭೆಗಳನ್ನು ನಡೆಸುತ್ತಿರುವುದು ಬಹಿರಂಗಗೊಂಡಿದೆ. ಹಿಂದೊಮ್ಮೆ ದಲಿತ ಮುಖಂಡರ ಸಭೆ ನಡೆದಿತ್ತು. ಇವತ್ತು ಕೋಲಾರ ಮೂಲದ ಸಚಿವ ಕೆ.ಹೆಚ್. ಮುನಿಯಪ್ಪ ನಿವಾಸದಲ್ಲಿ ಸಭೆ ನಡೆದಿದೆ. ಸತೀಶ್ ಮತ್ತು ಮುನಿಯಪ್ಪ ಅವರಲ್ಲದೆ ಗೃಹ ಸಚಿವ ಜಿ. ಪರಮೇಶ್ವರ್ ಮತ್ತು ಸಮಾಜ ಕಲ್ಯಾಣ ಖಾತೆ ಸಚಿವ ಹೆಚ್. ಸಿ. ಮಹದೇವಪ್ಪ ಸಭೆಯಲ್ಲಿ ಭಾಗಿಯಾಗಿದ್ದರು.



ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತಾಡಿದ ಸತೀಶ್ ಜಾರಕಿಹೊಳಿ, ಸಭೆಯ ಅಜೆಂಡಾ ಏನೂ ಇರಲಿಲ್ಲ, ಕಳೆದ ಬಾರಿ ಬೆಳಗಾವಿ ತಿಂಡಿಂ–ಯನ್ನು ಸವಿದಿದ್ದೆವು. ಈ ಬಾರಿ ಬದಲಾವಣೆಗೋಸ್ಕರ ಕೋಲಾರ ತಿಂಡಿ ತಿನ್ನುವ ಅಂತ ಸೇರಿದ್ದೆವು ಅಂತ ನಗುತ್ತಾ ಹೇಳಿದರು. ಸತೀಶ್ ಜಾರಕಿಹೊಳಿ, ಮುನಿಯಪ್ಪ ಮತ್ತು ಮಹಾದೇವಪ್ಪ ಜೊತೆ ಸೇರಿದಾಗ ಏನಾದರೂ ಒಂದು ವಿಶೇಷ ಇರುತ್ತದೆ, ಈ ಬಾರಿಯ ವಿಶೇಷತೆ ಏನು ಅಂತ ಕೇಳಿದಾಗ ಕೋಲಾರ ತಿಂಡಿ ಬಿಟ್ಟರೆ ಮತ್ತೇನೂ ವಿಶೇಷವಿಲ್ಲ ಎಂದು ಜಾರಕಿಹೊಳಿ ಹೇಳಿದರು. ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿಯನ್ನು ಆದಷ್ಟು ಬೇಗ ಬಿಡುಗಡೆ ಮಾಡಲಾಗುವುದು, ಹೈ ಕಮಾಂಡ್ ತೀರ್ಮಾನದ ಮೇರೆಗೆ ಅದು ನಡೆಯಲಿದೆ ಎಂದು ಸಚಿವ ಸತೀಶ್ ಹೇಳಿದರು.

# ಬೆನ್ನುಹುರಿ ಶಸ್ತ್ರಚಿಕಿತ್ಸಕರ ಭೇಟಿ

ಬೆಳಗಾವಿ: ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರದಲ್ಲಿ ಬೆನ್ನುಹುರಿ ತಪಾಸಣೆಯನ್ನು ಶನಿವಾರ ದಿ. 10 ಫೆಬ್ರುವರಿ 2024 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಏರ್ಪಡಿಸಲಾಗಿದೆ. ಪುಣೆಯ ಬೆನ್ನುಹುರಿ ಶಸ್ತ್ರಚಿಕಿತ್ಸಕರಾದ ಡಾ. ಸಂಜಯ ಪಾಟೀಲ ಅವರು ಆಗಮಿಸಲಿದ್ದು, ಬೆನ್ನುಹುರಿ ತೊಂದರೆಯಿಂದ ಬಳಲುತ್ತಿರುವವರನ್ನು ತಪಾಸಿಸಿ ಸೂಕ್ತ ಸಲಹೆ ಮತ್ತು ಶಸ್ತ್ರಚಿಕಿತ್ಸೆ ಕುರಿತು ಪರಿಹಾರ ತಿಳಿಸಲಿದ್ದಾರೆ.

ಈ ಭೇಟಿಯ ಸದಪಯೋಗವನ್ನು ಪಡೆದುಕೊಳ್ಳುವಂತೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರು ಕೋರಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರದ ಜನಸಂಪರ್ಕ ವಿಭಾಗ ಅಥವಾ ದೂ. 2473777, (ವಿಸ್ತೀರ್ಣ: 1116 \ 1117), ಇಲ್ಲಿಗೆ ಸಂಪರ್ಕಿಸಲು ಅರಿಕೆ.

# ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ನಾರ್ದರ್ನ್ ಆರ್ಕ್ ಕ್ಯಾಪಿಟಲ್

ಹುಬ್ಬಳ್ಳಿ: ವಿವಿಧ ಹಣಕಾಸು ಸೇವೆಗಳ ಪ್ಲಾಟ್ ಫಾರ್ಮ್ ಆದ ನಾರ್ದರ್ನ್ ಆರ್ಕ್ ಕ್ಯಾಪಿಟಲ್ ಲಿಮಿಟೆಡ್, ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟಿ ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಗೆ ಸಲ್ಲಿಸಿದೆ.

ರೂ.10 ಮುಖಬೆಲೆಯ ಈಕ್ವಿಟಿ ಷೇರಿನ ವಿತರಣೆಯ ಮೂಲಕ ಇನಿಷಿಯಲ್ ಪಬ್ಲಿಕ್ ಆಫರಿಂಗ್ ಮೂಲಕ ಹಣ ಸಂಗ್ರಹಿಸಲು ಕಂಪನಿ ಯೋಜಿಸಿದೆ. ಇದು ರೂ. 500 ಕೋಟಿ ವರೆಗಿನ ಒಟ್ಟು ಮೊತ್ತದ ತಾಜಾ ಸಂಚಿಕೆ ಒಳಗೊಂಡಿರುತ್ತದೆ ಮತ್ತು 21,052,629 ಈಕ್ವಿಟಿ ಷೇರುಗಳವರೆಗಿನ ಒಟ್ಟು ಮಾರಾಟದ ಆಫರ್ ಲಭ್ಯವಿದೆ.

ನಾರ್ದರ್ನ್ ಆರ್ಕ್ ವೈವಿಧ್ಯಮಯ ಹಣಕಾಸು ಸೇವೆಗಳ ವೇದಿಕೆಯಾಗಿದ್ದು, ಪ್ರಾಥಮಿಕವಾಗಿ ಇದನ್ನು ಭಾರತದಲ್ಲಿ ಹಿಂದುಳಿದ ವರ್ಗದ ಕುಟುಂಬಗಳು ಮತ್ತು ವ್ಯವಹಾರಗಳ ಚಿಲ್ಲರೆ ಸಾಲದ ಅವಶ್ಯಕತೆಗಳನ್ನು ಪೂರೈಸುವ ಉದ್ದೇಶದಿಂದ ಸ್ಥಾಪಿಸಲಾಗಿದೆ. ನಾರ್ದರ್ನ್ ಆರ್ಕ್ ಭಾರತದಲ್ಲಿ ಕೇಂದ್ರೀಕೃತ ವಲಯಗಳಲ್ಲಿ ಸಾಲ ಒದಗಿಸುವಲ್ಲಿ ಪರಿಣತಿ ಸಾಧಿಸಿದೆ, ಆ ವಲಯಗಳೆಂದರೆ, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಹಣಕಾಸು, ಮೈಕ್ರೋಫೈನಾನ್ಸ್ , ಕನ್ಸ್ಯೂಮರ್ ಫೈನಾನ್ಸ್, ವಾಹನಕ್ಕೆ ಹಣಕಾಸು, ಕೈಗೆಟುಕುವ ಹೌಸಿಂಗ್ ಫೈನಾನ್ಸ್ ಮತ್ತು ಕೃಷಿಗೆ ಹಣಕಾಸು. ನಾರ್ದರ್ನ್ ಆರ್ಕ್ ಎಂ–ಎಸ್‌ಎಂಇ, ಎಂಎಫ್‌ಐ ಮತ್ತು ಗ್ರಾಹಕ ಹಣಕಾಸು ವಲಯಗಳಲ್ಲಿ ಕ್ರಮವಾಗಿ 13 ವರ್ಷಗಳು, 14 ವರ್ಷಗಳು ಮತ್ತು ಎಂಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದೆ.

21,052,629 ಈಕ್ವಿಟಿ ಷೇರುಗಳವರೆಗೆ ಒಟ್ಟು ಮಾರಾಟದ ಆಫರ್, ಲೀಪ್‌ಫ್ರಾಗ್ ಫೈನಾನ್ಷಿಯಲ್ ಇನ್‌ಕ್ಲೂಷನ್ ಇಂಡಿಂ–ಯಾ (ಖಖ) ಲಿಮಿಟೆಡ್‌ನಿಂದ 4,922,949ವರೆಗಿನ ಒಟ್ಟುಗೂಡಿಸಿದ ಈಕ್ವಿಟಿ ಷೇರುಗಳನ್ನು; ಆಕ್ಸನ್ ಆಫ್ರಿಕಾ–ಏಷ್ಯಾ ಇನ್ವೆಸ್ಟ್ ಮೆಂಟ್ ಕಂಪನಿಯ ಒಟ್ಟು 1,265,476 ವರೆಗಿನ ಈಕ್ವಿಟಿ ಷೇರುಗಳು, ಆಗಸ್ಟಾ ಇನ್ವೆಸ್ಟ್ ಮೆಂಟ್ಸ್ ಖಖ ಲಿಮಿಟೆಡ್ನ ಒಟ್ಟು 4,254,744 ಈಕ್ವಿಟಿ ಷೇರುಗಳು; ಏಯ್ಟ್ ರೋಡ್ಸ್ ಇನ್ವೆಸ್ಟ್‌ಮೆಂಟ್ಸ್ ಮಾರಿಷಸ್ ಖಖ ಲಿಮಿಟೆಡ್ ಮೂಲಕ 2,237,030ವರೆಗಿನ ಒಟ್ಟುಗೂಡಿಸಿದ ಈಕ್ವಿಟಿ ಷೇರುಗಳು; ದ್ವಾರಾ ಟ್ರಸ್ಟ್‌ನಿಂದ 1,631,949ವರೆಗಿನ ಒಟ್ಟುಗೂಡಿಸಿದ ಈಕ್ವಿಟಿ ಷೇರುಗಳು; 360 ವನ್ ಸ್ಪೆಷಲ್ ಅಪಾರ್ಚುನಿಟೀಸ್ ಫಂಡ್ ನಿಂದ 5,000,000ವರೆಗಿನ ಒಟ್ಟುಗೂಡಿಸಿದ ಈಕ್ವಿಟಿ ಷೇರುಗಳು; 360 ವನ್ ಸ್ಪೆಷಲ್ ಒಪ್ಪೋರ್ಚುನಿಟಿಸ್ ಫಂಡ್ ಸೀರೀಸ್–2ನಿಂದ 107,696ವರೆಗೆ ಒಟ್ಟುಗೂಡಿಸಿದ ಈಕ್ವಿಟಿ ಷೇರುಗಳು; 360 ವನ್ ಸ್ಪೆಷಲ್ ಒಪ್ಪೋರ್ಚುನಿಟಿಸ್ ಫಂಡ್ ಸೀರೀಸ್–3 ರಿಂದ 47,373 ವರೆಗಿನ ಒಟ್ಟುಗೂಡಿಸಿದ ಈಕ್ವಿಟಿ ಷೇರುಗಳು; 360 ವನ್ ಸ್ಪೆಷಲ್ ಅಪಾರ್ಚುನಿಟೀಸ್ ಫಂಡ್ ಸೀರೀಸ್–4ನಿಂದ 162,817 ವರೆಗಿನ ಒಟ್ಟುಗೂಡಿಸುವ ಈಕ್ವಿಟಿ ಷೇರುಗಳು; 360 ವನ್ ಸ್ಪೆಷಲ್ ಒಪ್ಪೋರ್ಚುನಿಟಿಸ್ ಫಂಡ್ ಸೀರೀಸ್– 5 ರಿಂದ 133,595ವರೆಗೆ ಒಟ್ಟುಗೂಡಿಸುವ ಈಕ್ವಿಟಿ ಷೇರುಗಳು; 360 ವನ್ ಸ್ಪೆಷಲ್ ಒಪ್ಪೋರ್ಚುನಿಟಿಸ್ ಫಂಡ್ ಸೀರೀಸ್–6ರಿಂದ 5,481ವರೆಗೆ ಒಟ್ಟುಗೂಡಿಸುವ ಈಕ್ವಿಟಿ ಷೇರುಗಳು;360 ವನ್ ಸ್ಪೆಷಲ್ ಅಪಾರ್ಚುನಿಟೀಸ್ ಫಂಡ್ ಸೀರೀಸ್–6ರಿಂದ 132,299ವರೆಗೆ ಒಟ್ಟುಗೂಡಿಸುವ ಈಕ್ವಿಟಿ ಷೇರುಗಳು; ಸುಮಿಟೊಮೊ ಮಿಟ್ಸುಯಿ ಬ್ಯಾಂಕಿಂಗ್‌ನಿಂದ 1,151,220 ವರೆಗೆ ಒಟ್ಟುಗೂಡಿಸುವ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ನಾರ್ದರ್ನ್ ಆರ್ಕ್ ಕ್ಯಾಪಿಟಲ್ ಲಿಮಿಟೆಡ್, ಮುಂದಿನ ಸಾಲ ನೀಡುವುದಕ್ಕಾಗಿನ ಭವಿಷ್ಯದ ಬಂಡವಾಳದ ಅವಶ್ಯಕತೆಗಳನ್ನು ಪೂರೈಸಲು ನಿವ್ವಳ ಆದಾಯವನ್ನು ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ.

ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್, ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್ ಮತ್ತು ಸಿಟಿಗ್ರೂಪ್ ಗ್ಲೋಬಲ್ ಮಾರ್ಕೆಟ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಈ ಇಶ್ಯೂವಿನ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳು.

# ಫೆ. 10 ರಂದು ಶರಣ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಢೋಹರ ಕಕ್ಕಯ್ಯ ಸಮಗಾರ ಹರಳಯ್ಯ ಹಾಗೂ ಉರಿಲಿಂಗಪೆದ್ದಿಯವರ ಜಯಂತಿ ಉತ್ಸವ

ಬೆಳಗಾವಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಫೆ. 10 ರಂದು ಬೆಳಗ್ಗೆ 11 ಗಂಟೆಗೆ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಶರಣ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಢೋಹರ ಕಕ್ಕಯ್ಯ ಸಮಗಾರ ಹರಳಯ್ಯ ಹಾಗೂ ಉರಿಲಿಂಗಪೆದ್ದಿಯವರ ಜಯಂತಿ ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಜಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಅವರು ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ಉತ್ತರ ವಿಧಾನಸಭೆ ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ವಿಧಾನಸಭೆ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ನವದೆಹಲಿಯ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ, ರಾಜ್ಯ ಹಣಕಾಸು ಸಂಸ್ಥೆಯ ಅಧ್ಯಕ್ಷರು ಮಹಾಂತೇಶ ಕೌಜಲಗಿ ಅವರು ವಿಶೇಷ ಆಮಂತ್ರತರಾಗಿ ಆಗಮಿಸಲಿದ್ದಾರೆ.

ಪ್ರಾದೇಶಿಕ ಆಯುಕ್ತರಾದ ಸಂಜಯ ಶೆಟ್ಟೆಣ್ಣವರ, ಉತ್ತರ ವಲಯ ಪೊಲೀಸ್ ಮಹಾನಿರೀಕ್ಷಕರಾದ ವಿಕಾಸ್ ಕುಮಾರ್ ವಿಕಾಶ್, ಜಿಲ್ಲಾಧಿಕಾ–ರಿಗಳಾದ ನಿತೇಶ್ ಪಾಟೀಲ, ಬೆಳಗಾವಿ ಪೊಲೀಸ್ ಆಯುಕ್ತರಾದ ಎಸ್. ಎನ್ ಸಿದ್ಧರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಬೀಮಾಶಂಕರ ಗುಳೇದ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕರಾದ ರಾಹುಲ್ ಶಿಂಧೆ, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ಕಾರ್ಯಕ್ರಮದ ವೇದಿಕೆಯಲ್ಲಿ ಉಪಸ್ಥಿತ ಇರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089